# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 63 THURSDAY 14-05-2026 PRGI No : KNKAN/26/A0962 Pages:4 Rs.2.00 M: 9742418836


## ಕೇರಳ ಮುಖ್ಯಮಂತ್ರಿ ಆಯ್ಕೆ ನಂತರ ಕರ್ನಾಟಕದತ್ತ ಹೈಕಮಾಂಡ್ ಗಮನ: ಸಚಿವ ಸತೀಶ್ ಜಾರಕಿಹೊಳಿ



ಬೆಂಗಳೂರು: ಕೇರಳದಲ್ಲಿ ಮುಖ್ಯಮಂತ್ರಿ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಂಗ್ರೆಸ್ ಹೈಕಮಾಂಡ್ ಶೀಘ್ರದಲ್ಲೇ ರಾಜ್ಯದತ್ತ ಗಮನ ಹರಿಸಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ನಾಯಕತ್ವ ವಿಚಾರವಾಗಿ ಹೈಕಮಾಂಡ್ ಮೌನದ ವಿಚಾರವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾಬಿನೆಟ್ ಪುನಾರಚನೆ ಬಗ್ಗೆ ತೀರ್ಮಾನಿಸಲು ಈ ತಿಂಗಳ ಅಂತ್ಯದವರಗೆ ಸಮಯ ಇದೆ. ಮೊದಲು ಕೇರಳ ಸಿಎಂ ಇತ್ಯರ್ಥ ಆಗಬೇಕು. ಇನ್ನೂ ಸ್ವಲ್ಪ ದಿನ ಕಾಯಬೇಕು ಎಂದಿದ್ದಾರೆ.

ಸಂಪುಟ ವಿಸ್ತರಣೆ ಹಳೆ ಡಿಮ್ಯಾಂಡ್ ಹೀಗಾಗಿ ಹೈಕಮಾಂಡ್ ಏನು ಮಾಡುತ್ತೆ ಅಂತ ನೋಡಬೇಕು. ಆದರೆ ಕೇರಳ ಮೊದಲು ಮುಗಿಯಬೇಕು. ಅಲ್ಲಿಯೂ ಗೊಂದಲವಿದೆ, ಆಕಾಂಕ್ಷಿಗಳು ಇದ್ದಾರೆ. ಹೈಕಮಾಂಡ್ ಎಲ್ಲ ಬಗೆಹರಿಸುತ್ತದೆ. ಕೇರಳದ್ದು ಮುಗಿದ ಮೇಲೆ ಸಿಎಂ ಸಿದ್ದರಾಮಯ್ಯ ದೆಹಲಿಗೆ ಹೋಗಬಹುದು ಎಂದರು.

ಹೈಕಮಾಂಡ್ ಮುಂದೆ ನಮ್ಮ ಬೇಡಿಕೆ ಒಂದೇ, ರಾಜ್ಯದ ಗೊಂದಲ ಬಗೆಹರಿಸಬೇಕು. ಸುಮಾರು ನಾಯಕರು ಇದೆ ಹೇಳಿದ್ದಾರೆ. ನಾಯಕತ್ವ ಬದಲಾವಣೆ ಪರಿಹಾರ ಮಾಡಬೇಕು. ಗೊಂದಲ, ಘರ್ಷಣೆ ನಿಲ್ಲಬೇಕು ಎಂಬುದಷ್ಟೇ ನಮ್ಮ ಬೇಡಿಕೆ. ಇಲ್ಲಿ ನಾನು ಒಪ್ಪುವುದು ಬರುವುದಿಲ್ಲ. ಈಗಾಗಲೇ ಸಿಎಂ ಕೂಡ ಹೈಕಮಾಂಡ್ ಹೇಳಿದಂತೆ ಕೇಳುತ್ತೇನೆ ಅಂತ ಹೇಳಿದ್ದಾರೆ ಎಂದು ತಿಳಿಸಿದರು.

ಹೈಕಮಾಂಡ್ ವೀಕ್ ಆಗಿಲ್ಲ. ಬಿಜೆಪಿ ಕೂಡ ಇಂತಹ ಸಂದರ್ಭಗಳಲ್ಲಿ ಟೈಮ್ ತೆಗೆದುಕೊಂಡಿದೆ. ನಮ್ಮಲ್ಲಿ ಕೂಡ ಸಿಎಂ ಆಯ್ಕೆ ತಡವಾಯಿತು. ಕೆ.ಸಿ. ವೇಣುಗೋಪಾಲ್ ಕೇರಳ ಸಿಎಂ ಆಗುವ ಬಗ್ಗೆ ಗೊತ್ತಿಲ್ಲ. ಹೈಕಮಾಂಡ್ ಎಲ್ಲ ತೀರ್ಮಾನ ಮಾಡುತ್ತದೆ ಎಂದರು.

ಜಿಬಿಎ ಚುನಾವಣೆ ಮಾಡುತ್ತೇನೆ ಅಂತ ಡಿಸಿಎಂ ಅವರೇ ಹೇಳಿದ್ದಾರೆ. ನೌಕರರು ಖಾಲಿ ಇಲ್ಲ, ಗಣತಿ ಮಾಡುತ್ತಿದ್ದಾರೆ. ಅದಕ್ಕೆ ಮಳೆಗಾಲ ಮುಗಿದ ಮೇಲೆ ಅವಕಾಶ ನೀಡಿ ಎಂದು ಕೋರಿ ಸುಪ್ರೀಂ ಕೋರ್ಟ್?ಗೆ ಅರ್ಜಿ ಹಾಕುತ್ತಿದ್ದಾರೆ ಎಂದರು.

## ಬಹುಮತ ಸಾಬೀತು; ವಿಶ್ವಾಸ ಗೆದ್ದ ವಿಜಯ್

**ವಿಜಯ್ ವಿಶ್ವಾಸಮತ ಅಂಕಿ ಅಂಶ**
ವಿಜಯ್ ಪರ– 144
ವಿಜಯ್ ವಿರುದ್ಧ– 22
ತಟಸ್ಥ – 5



ಚೆನ್ನೈ: ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಮುಖ್ಯಮಂತಿ ಗಾದಿ ಅಲಂಕರಿಸಿದ್ದ ಟಿವಿಕೆಯ ಜೋಸೆಫ್ ವಿಜಯ್ ಅವರು ವಿಶ್ವಾಸ ಮತ ಗೆದ್ದಿದ್ದು ಟಿವಿಕೆ ಸರ್ಕಾರ ಈಗ ಸುಭದ್ರವಾಗಿದೆ. ತಮಿಳುನಾಡು ವಿಧಾನಸಭೆಯಲ್ಲಿ ಇಂದು ನಡೆದ ವಿಶ್ವಾಸ ಮತ ಪರೀಕ್ಷೆಯಲ್ಲಿ ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಬಹುಮತ ಸಾಬೀತುಪಡಿಸಿದ್ದು ಮುಖ್ಯಮಂತ್ರಿ ವಿಜಯ್ ಅವರಿಗೆ 144 ಶಾಸಕರ ಬೆಂಬಲ ಸಿಕ್ಕಿದೆ.

ಈ ವಿಶ್ವಾಸ ಮತ ಯಾಚನೆ ಸಂದರ್ಭದಲ್ಲಿ ವಿಪಕ್ಷವಾದ ಡಿಎಂಕೆ ಸಭಾತ್ಯಾಗ ಮಾಡಿದ್ದು ಅಣ್ಣಾಡಿಎಂಕೆಯ ಹಲವು ಶಾಸಕರು ನಟ ವಿಜಯ್ ಪರ ನಿಂತಿದ್ದು ವಿಜಯ್ ಅವರು ವಿಶ್ವಾಸ ಮತ ಸುಲಭವಾಗಿ ಸಾಧಿಸಲು ನೆರವಾಯಿತು.

ಟಿವಿಕೆ ಮಿತ್ರಪಕ್ಷಗಳಾದ ಕಾಂಗ್ರೆಸ್‌ನ ಐವರು ಶಾಸಕರು, ಸಿಪಿಐ, ಸಿಪಿಎಂ, ವಿಸಿಕೆ, ಇಂಡಿಯನ್ ಮುಸ್ಲಿಂ ಲೀಗ್‌ನ ತಲಾ ಇಬ್ಬರು ಶಾಸಕರು ಜೊತೆಗೆ ಎಎಂಎಂಕೆಯ ಒಬ್ಬ ಶಾಸಕ ಮತ್ತು ಅಣ್ಣಾಡಿಎಂಕೆಯ 25 ಶಾಸಕರು, ವಿಜಯ್ ಪರ ಮತ ಹಾಕಿದರು. ವಿಜಯ್ ವಿರುದ್ಧ ಅಣ್ಣಾಡಿಎಂಕೆಯ 22 ಶಾಸಕರು ಮತ ಚಲಾಯಿಸಿದ್ದರೆ ಐವರು ಶಾಸಕರು ತಟಸ್ಥವಾಗಿ ಉಳಿದರು.

ವಿಧಾನಸಭಾಧ್ಯಕ್ಷ ಪ್ರಭಾಕರ್ ವಿಶ್ವಾಸಮತ ಸಂದರ್ಭದಲ್ಲಿ ಪ್ರತಿಯೊಬ್ಬರ ಶಾಸಕರ ಹೆಸರು ಹೇಳಿ ತಲೆ ಎಣಿಕೆ ಮಾಡಿ ವಿಶ್ವಾಸಮತ ಯಾಚನೆ ಪ್ರಕ್ರಿಯೆಯನ್ನು ನಡೆಸಿದರು. ನಂತರ ವಿಜಯ್ ಪರ ಒಟ್ಟು 144 ಶಾಸಕರು ಮತ ಹಾಕಿರುವುದನ್ನು ಸದನದಲ್ಲಿ ಹೇಳಿ ಟಿವಿಕೆಯ ಮುಖ್ಯಮಂತ್ರಿ ವಿಜಯ್ ಬಹುಮತ ಸಾಬೀತುಪಡಿಸಿದ್ದಾರೆ ಎಂದು ಅಧಿಕೃತವಾಗಿ ಘೋಷಿಸಿದ್ದರು.

ವಿಶ್ವಾಸ ಮತ ಗೆಲ್ಲುವ ಮುಖ್ಯಮಂತ್ರಿ ಜೋಸೆಫ್ ವಿಜಯ್ ನೇತೃತ್ವದ ಸರ್ಕಾರ ಸುಭದ್ರವಾಗಿದ್ದು, ಯಾವುದೇ ಅಡ್ಡಿ ಆತಂಕವಿಲ್ಲದೆ ನಿರಾಂತಕವಾಗಿ ಆಡಳಿತ ನಡೆಸುವ ಹಾದಿ ಸುಗಮವಾದಂತಾಗಿದೆ.

ಮುಖ್ಯಮಂತ್ರಿಯಗಿ ಟಿವಿಕೆ ಪಕ್ಷದ ವಿಜಯ್ ಕಳೆದ ಭಾನುವಾರ ಅಧಿಕಾರ ಸ್ವೀಕರಿಸಿದ್ದರು. ಮೇ. 13 ರೊಳಗೆ ಬಹುಮತ ಸಾಬೀತುಪಡಿಸುವಂತೆ ತಮಿಳುನಾಡಿನ ರಾಜ್ಯಪಾಲರು ನಿರ್ದೇಶನ ನೀಡಿದ್ದರು.

ಅದರಂತೆ ಮುಖ್ಯಮಂತ್ರಿ ವಿಜಯ್ ಬಹುಮತ ಸಾಬೀತುಪಡಿಸುವಲ್ಲಿ ಯಶಸ್ಸು ಸಾಧಿಸಿದ್ದಾರೆ.

**ಡಿಎಂಕೆ ಸಭಾತ್ಯಾಗ**

ತಮಿಳುನಾಡಿನಲ್ಲಿ ವಿರೋಧಪಕ್ಷವಾದ ಡಿಎಂಕೆ, ಟಿವಿಕೆ ಸರ್ಕಾರದ ನಡವಳಿಯನ್ನು ಖಂಡಿಸಿ ವಿಶ್ವಾಸಮತ ಯಾಚನೆಯಲ್ಲಿ ಪಾಲ್ಗೊಳ್ಳದೆ

ಸಭಾತ್ಯಾಗ ಮಾಡಿತು. ಹಾಗಾಗಿ ಸದನದಲ್ಲಿ ಹಾಜರಿದ್ದ ಶಾಸಕರ ಸಂಖ್ಯಾ ಬಲದ ಮೇಲಿನ ಬಹುಮತವನ್ನು ಲೆಕ್ಕಾ ಹಾಕಲಾಯಿತು. ಟಿವಿಕೆ ಪಕ್ಷ ತಮಿಳುನಾಡು ಜನರಿಗೆ ಸುಳ್ಳು ಭರವಸೆ ನೀಡಿದೆ. ಅದನ್ನು ಈಡೇರಿಸಲು ಸಾಧ್ಯವಿಲ್ಲ. ಹೀಗಾಗಿ ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರ ಸರ್ಕಾರಕ್ಕೆ ನಮ್ಮ ಬೆಂಬಲವಿಲ್ಲ ಎಂದು ಸಭಾತ್ಯಾಗಕ್ಕೂ ಮುನ್ನ ವಿಪಕ್ಷ ನಾಯಕ ಉದಯನಿಧಿ ಸ್ಟಾಲಿನ್ ಹೇಳಿದರು.

**ಅಣ್ಣಾಡಿಎಂಕೆ ಇಬ್ಭಾಗ**

ಅಣ್ಣಾಡಿಎಂಕೆ ಇಬ್ಭಾಗವಾದಂತಾಗಿದ್ದು ಅಣ್ಣಾಡಿಎಂಕೆಯ 25 ಬಂಡಾಯ ಶಾಸಕರು ಮುಖ್ಯಮಂತ್ರಿ ವಿಜಯ್ ಪರ ಮತ ಹಾಕಿದರು. ವೇಲುಮಣಿ ಮತ್ತು ಷಣ್ಮುಗಂ ನೇತೃತ್ವದ ಅಣ್ಣಾಡಿಎಂಕೆ ಬಣದ ಶಾಸಕರು, ಪಕ್ಷದ ಮುಖ್ಯಸ್ಥ ಎಡಪ್ಪಾಡಿ ಪಳನಿಸ್ವಾಮಿ ಅವರ ನಿಲುವನ್ನು ಧಿಕ್ಕರಿಸಿ ವಿಜಯ್ ಸರ್ಕಾರವನ್ನು ಬೆಂಬಲಿಸಿದ್ದು ಅಣ್ಣಾಡಿಎಂಕೆ ಇಬ್ಭಾಗವಾದಂತಾಗಿದೆ.

**ದ್ವೇಷ ರಾಜಕಾರಣ ಇಲ್ಲ**

ತಮಿಳುನಾಡು ವಿಧಾನಸಭೆಯಲ್ಲಿ ವಿಶ್ವಾಸಮತ ಗೆದ್ದ ನಂತರ ಸರ್ಕಾರಕ್ಕೆ ಬೆಂಬಲ ಘೋಷಿಸಿದ ಎಲ್ಲರಿಗೂ ಧನ್ಯವಾದ ಹೇಳಿದ ಮುಖ್ಯಮಂತ್ರಿ ಜೋಸೆಫ್ ವಿಜಯ್ ನಮ್ಮದು ಮೈತ್ರಿ ಸರ್ಕಾರ ಚುನಾವಣಾ ಪೂರ್ವದಲ್ಲಿ ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸಲು ಬದ್ಧ ಎಂದರು.

ನಮಗೆ ಯಾರ ಮೇಲೂ ದ್ವೇಷವಿಲ್ಲ. ದ್ವೇಷ ರಾಜಕಾರಣ ಮಾಡಲ್ಲ. ಮತ ಹಾಕಿದವರೂ, ಹಾಕದವರೂ ಎಂಬ ಬೇಧಭಾವ ಮಾಡುವ ಪ್ರಶ್ನೆಯೇ ಇಲ್ಲ. ನಮ್ಮ ಸರ್ಕಾರ ಸದಾ ಜನಪರವಾಗಿರುತ್ತದೆ ಎಂದರು.

ನಮ್ಮ ಸರ್ಕಾರ ಪೆರಿಯಾರ್, ಕಾಮರಾಜ್, ಡಾ. ಬಿ.ಆರ್. ಅಂಬೇಡ್ಕರ್ ತತ್ವಸಿದ್ಧಾಂತಗಳಡಿ ಕಾರ್ಯನಿರ್ವಹಿಸುತ್ತದೆ. ಜಾತಿ, ಧರ್ಮ, ಯಾವುದೇ ಬೇಧಭಾವವಿಲ್ಲದೆ ತಮಿಳುನಾಡಿನ ಜನರ ಅಭಿವೃದ್ಧಿಗೆ ಕೆಲಸ ಮಾಡುತ್ತದೆ ಎಂದು ಹೇಳಿದರು.

## ರೋಗಿಗಳಿಗೆ ಉತ್ತಮ ಆರೋಗ್ಯ ಸೇವೆ ಕಲ್ಪಿಸಿಕೊಡಲು ಅಗತ್ಯವಿರುವ ಸಿಬ್ಬಂದಿಗಳನ್ನು ಈ ಕೂಡಲೇ ಭರ್ತಿ ಮಾಡಲು ಕ್ರಮ ಕೈಗೊಳ್ಳಿ: ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ರೋಗಿಗಳಿಗೆ ಉತ್ತಮ ಆರೋಗ್ಯ ಸೇವೆ ಕಲ್ಪಿಸಿಕೊಡಲು ಅಗತ್ಯವಿರುವ ಸಿಬ್ಬಂದಿಗಳನ್ನು ಈ ಕೂಡಲೇ ಭರ್ತಿ ಮಾಡಲು ಕ್ರಮ ಕೈಗೊಳ್ಳಲು ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರದಂದು ಗೋಕಾಕ ತಾಲೂಕಿನ ಕೌಜಲಗಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆರೋಗ್ಯ ಇಲಾಖಾಧಿಕಾರಿಗಳ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸಿಬ್ಬಂದಿ ನೇಮಕಾತಿ ಪ್ರಕ್ರಿಯೆಗೆ ಜಿಲ್ಲಾ ಆರೋಗ್ಯಾಧಿಕಾರಿಗಳು ತಕ್ಷಣವೇ ಕ್ರಮವನ್ನು ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಕೌಜಲಗಿ ಮತ್ತು ಸುತ್ತಮುತ್ತಲಿನ ಹಳ್ಳಿಗಳಿಗೆ ಅನುಕೂಲವಾಗಲು ಸುಸಜ್ಜಿತ ಆಸ್ಪತ್ರೆಯನ್ನು ನಿರ್ಮಿಸಲಾಗಿದೆ. ಆದರೆ, ಈ ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆಯಿರುವುದರಿಂದ ರೋಗಿಗಳಿಗೆ ಗುಣಮಟ್ಟದ ಸೇವೆಯನ್ನು ಒದಗಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಕೂಡಲೇ ಆರೋಗ್ಯಾಧಿಕಾರಿಗಳು ನೀಗಾ ವಹಿಸಿ ರೋಗಿಗಳಿಗೆ ಅಗತ್ಯವಿರುವ ಸೇವೆಯನ್ನು ಕಲ್ಪಿಸಲು ಮುಂದಾಗಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೌಜಲಗಿ ಮತ್ತು ಸುತ್ತಲಿನ ಹಳ್ಳಿಗಳ ನಾಗರಿಕರಿಗೆ ಅನುಕೂಲವಾಗಲು ಇಲಾಖೆಯು ಮುಂದೆ ಬರಬೇಕು.ಆಸ್ಪತ್ರೆ ನಿರ್ಮಾಣವಾಗಿ 10 ತಿಂಗಳು ಗತಿಸಿದರೂ ಇದುವರೆಗೂ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿ ನೇಮಕಾತಿ ಆಗಿಲ್ಲ. ನಾಗರಿಕರಿಗೆ ಸೌಲಭ್ಯಗಳನ್ನು ನೀಡದಿದ್ದಲ್ಲಿ ಆಸ್ಪತ್ರೆ ಮಾಡಿ ಏನೂ ಪ್ರಯೋಜನವೆಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಅತೀ ಶೀಘ್ರವಾಗಿ ಖಾಲಿಯಿರುವ ಸ್ಥಾನಗಳಿಗೆ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಬೇಕು. ಗುತ್ತಿಗೆಯ ಆಧಾರದ ಮೇಲೆಯಾದರೂ ನೇಮಕಾತಿಯನ್ನು ಮಾಡಿಕೊಳ್ಳಬೇಕು. ಅತೀ ದೊಡ್ಡ ಆರೋಗ್ಯ ಕೇಂದ್ರವಿದ್ದರೂ ಒಂದಿಬ್ಬರು ಮಾತ್ರ ಸೇವೆ ಸಲ್ಲಿಸುತ್ತಿದ್ದಾರೆ. ಇದರಿಂದ ನಾಗರಿಕರಿಗೆ ತುಂಬ ತೊಂದರೆಯಾಗುತ್ತಿದೆ. ಹೆರಿಗೆ ಮತ್ತು ಪ್ರಸೂತಿ

ತಜ್ಞರು ಹಾಗೂ ಚಿಕ್ಕ ಮಕ್ಕಳ ತಜ್ಞರು, ತಜ್ಞ ವೈದ್ಯರು, ಸ್ಟಾಫ್ ನರ್ಸ್, ಪ್ರಯೋಗಾಲಯ ತಂತ್ರಜ್ಞ ಸೇರಿದಂತೆ ಹಲವು ಸ್ಥಾನಗಳು ಖಾಲಿಯಿವೆ. ಆಯುಷ್ಯ ವೈದ್ಯರು ಸೇರಿದಂತೆ ಇಬ್ಬರು ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ. ಸಮುದಾಯ ಆರೋಗ್ಯ ಕೇಂದ್ರದಂತಹ ದೊಡ್ಡ ಆಸ್ಪತ್ರೆಯಲ್ಲಿ ಸಿಬ್ಬಂದಿಗಳ ನೇಮಕಕ್ಕೆ ಚುರುಕು ಮುಟ್ಟಿಸಲು ಅಧಿಕಾರಿಗಳು ಮುತುವರ್ಜಿ ವಹಿಸಲು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಆಸ್ಪತ್ರೆಯ ಸ್ಥಿತಿ– ಗತಿ ಕುರಿತು ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದುಕೊಂಡರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಮುತ್ತಣ್ಣ ಕೊಪ್ಪದ ಸೇರಿದಂತೆ ಇಲಾಖೆಯ ಮತ್ತಿತರರು ಉಪಸ್ಥಿತರಿದ್ದರು



## ಕುಡಿಯುವ ನೀರಿನ ಉದ್ದೇಶಕ್ಕಾಗಿ ಮೂರು ಕಾಲುವೆಗಳಿಗೆ ನೀರು ಹರಿಸಲು ಮನವಿ



ಗೋಕಾಕ: ಎನ್‌ಎಸ್‌ಎಫ್ ಕಾರ್ಯಾಲಯದಲ್ಲಿ ಅಧಿಕಾರಿಗಳ ಸಭೆಯಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ.

**ಬೆಳಗಾವಿ ವಾರ್ತೆ ಗೋಕಾಕ:** ಸಾರ್ವಜನಿಕರಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಿಡ್ಕಲ್ ಜಲಾಶಯದಿಂದ ಮೂರು ಕಾಲುವೆಗಳಿಗೆ ನೀರು ಹರಿಸಲು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿಯವರಿಗೆ ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಮನವಿ ಮಾಡಿಕೊಂಡರು.

ಇಲ್ಲಿನ ಎನ್‌ಎಸ್‌ಎಫ್ ಕಾರ್ಯಾಲಯದಲ್ಲಿ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೇಸಿಗೆಯ ಆಹಾಕಾರ ತಪ್ಪಿಸಲು ಕಾಲುವೆಗಳಿಗೆ ನೀರು ಹರಿಸುವುದು ಅವಶ್ಯವಾಗಿದೆ ಎಂದವರು ತಿಳಿಸಿದರು.

ಘಟಪ್ರಭಾ ಎಡದಂಡೆ, ಘಟಪ್ರಭಾ ಬಲದಂಡೆ ಮತ್ತು ಸಿಬಿಸಿ ಕಾಲುವೆಗಳಿಗೆ ನೀರು ಹರಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಿಕರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಪ್ರಸಕ್ತ ಸನ್ನಿವೇಶದಲ್ಲಿ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿಯವರು ಜನರ ಹಿತದೃಷ್ಟಿಯಿಂದ ನೀರು ಹರಿಸುವ ವಿಶ್ವಾಸ ನನಗಿದೆ. ಇನ್ನೆರಡು ದಿನಗಳಲ್ಲಿ ರೈತರಿಗೆ ಶುಭ ಸುದ್ದಿ ಸಿಗಲಿದೆ ಎಂದು ತಿಳಿಸಿದರು.

ಕಾಲುವೆಗಳಿಗೆ ನೀರು ತಲುಪಿಸಲು ಅಧಿಕಾರಿಗಳು ಮುಂದೆ ಬರಬೇಕು. ನದಿ ತೀರದ ಗ್ರಾಮಗಳಿಗೂ ಸಹ ನೀರು ಹರಿಯಬೇಕು. ಸಾರ್ವಜನಿಕರು ಮತ್ತು ಅಧಿಕಾರಿಗಳ ಮಧ್ಯ ಸಮನ್ವಯ ಸಾಧಿಸಲು ನಮ್ಮ ಟೀಂ ಎನ್‌ಎಸ್‌ಎಫ್ ಸಿದ್ಧವಿದೆ. ರೈತರಿಗೆ ನೀರು ಸಿಗಬೇಕೆನ್ನುವ ಮಹತ್ವಾಕಾಂಕ್ಷೆ ನಮ್ಮದು ಎಂದರು.

ನೀರಾವರಿ ನಿಗಮದ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಬ್ರಾಹಿಂ ಸಾಹೇಬರ ಆದರ್ಶ ಇಂದಿಗೂ ಪ್ರಸ್ತುತ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಕರ್ನಾಟಕ ರಾಜ್ಯ ನದಾಫ್ ಪಿಂಜಾರ್ ಸಂಘ ಶಿವಮೊಗ್ಗ ಧಾರವಾಡ ಜಿಲ್ಲಾ ಘಟಕ ಹಾಗೂ ಹುಬ್ಬಳ್ಳಿ ತಾಲೂಕಾ ಶಹರ ವ ಗ್ರಾಮೀಣ ಘಟಕದ ವತಿಯಿಂದ ಸಂಸ್ಥಾಪಕ ಅಧ್ಯಕ್ಷರಾದ ದಿವಂಗತ ಅಲ್ ಹಾಜ್ ಎಚ್ ಇಬ್ರಾಹೀಂಮ ಸಾಹೇಬರ 95 ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.

ಮಾಜಿ ರಾಜ್ಯ ಘಟಕದ ಅಧ್ಯಕ್ಷರಾದ ಹಜರತ್ ಅಲಿ ದೂಡ್ಡಮನಿ, ಮಾಜಿ ರಾಜ್ಯ ಪ್ರಧಾನಕಾರ್ಯದರ್ಶಿಗಳಾದ ಪಿ. ಬಿ. ನದಾಫ್, ರಾಜ್ಯ ಘಟಕದ ಉಪಾಧ್ಯಕ್ಷರಾದ ಎಮ್. ಎಚ್. ಬೆಂಡಿಗೇರಿ, ಧಾರವಾಡ ಜಿಲ್ಲಾ ಅಧ್ಯಕ್ಷ ಎಫ್. ಎಮ್. ನದಾಫ್, ಖ್ವಾಜಾಸಾಬ ನದಾಫ್, ದಾವಲಸಾಬ ನದಾಫ್, ಹುಬ್ಬಳ್ಳಿ ತಾಲೂಕು ಶಹರ ಅಧ್ಯಕ್ಷ ಖುದಾನಸಾಬ ಗೂಗ್ಗಲ್, ಹುಬ್ಬಳ್ಳಿ ತಾಲೂಕು ಗ್ರಾಮೀಣ ಘಟಕದ ಅಧ್ಯಕ್ಷ ಇಸ್ಮಾಯಿಲ್ ಸಾಬ್ ನದಾಫ್ ಮಾತನಾಡಿ, ಇಬ್ರಾಹೀಂ ಸಾಹೇಬರ ಆದರ್ಶಗಳು ಇಂದಿಗೂ ಪ್ರಸ್ತುತ ಎಂದರು.

ಈ ಸಂದರ್ಭದಲ್ಲಿ ಎನ್. ಎಸ್. ನದಾಫ್, ದಿವಾನಸಾಬ ನದಾಫ್, ರಫೀಕ್ ಅಹ್ಮದ್ ದೊಡ್ಡಮನಿ, ರಿಯಾಜ್ ಅಹ್ಮದ ಕೆ ನದಾಫ್, ಖಾದರ್ ಬಾಷಾ ಶಿಬಾರಗಟ್ಟಿ, ಹಜರತ್ ಅಲಿ ನದಾಫ್, ನಜಿರಸಾಬ ಕುಂದಗೋಳ, ಹಸನಸಾಬ



ನದಾಫ್, ಎಮ್ ಕೆ ನದಾಫ್, ಖಲಂದರ ಜಿಗಳೂರ, ಮಲಂಗಸಾಬ ನದಾಫ್, ಖಾದರಸಾಬ ನದಾಫ್, ಮಹಬೂಬ ಸಾಬ ನದಾಫ್, ಹನಿಫ್ ನದಾಫ್, ಮೌಲಾಸಾಬ ನದಾಫ್, ಎ ಹಾಗೂ ಆರ್ ವಾಯ್ ನದಾಫ್ ಪಾಲ್ಗೊಂಡಿದ್ದರು. ತಾಲೂಕು ಕಾರ್ಯದರ್ಶಿ ಅಬ್ದುಲ್ ನಬಿ ನದಾಫ್ ವಂದಿಸಿದರು.

## ಕೂಡಲಸಂಗಮ : ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಕೂಡಲಸಂಗಮ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಿಂದ ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳಿಂದ ಮೂರು ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಟೂಲ್ ಅಂಡ್ ಡೈ ಮೇಕಿಂಗ್, ಮೆಕಟ್ರಾನಿಕ್ಸ್, ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಕೋರ್ಸ್‌ಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನ ಮೇ 10 ಆಗಿದೆ. ಈ ಕೋರ್ಸ್‌ಗಳು 3+1 ವರ್ಷದ ಅವಧಿಯದಾಗಿದ್ದು, ನಾಲ್ಕನೇ ವರ್ಷದಲ್ಲಿ ಪ್ರತಿಷ್ಠಿತ ಕಂಪನಿಗಳಲ್ಲಿ ಕಡ್ಡಾಯವಾಗಿ ಒಂದು ವರ್ಷದ ತರಬೇತಿಗೆ ಕಳುಹಿಸಲಾಗುತ್ತದೆ. ಈ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಇನ್ನಿತರ ಸೌಲಭ್ಯಗಳ ಜೊತೆಗೆ ಆಕರ್ಷಕ ಸ್ಟೈಪೆಂಡ್ ಕೂಡ ನೀಡಲಾಗುತ್ತದೆ. ಪ್ರವೇಶ ಪಡೆಯಲು ವಿದ್ಯಾರ್ಥಿಗಳು ಹಾಗೂ ಪಾಲಕರು ಅಗತ್ಯ ದಾಖಲೆಗಳೊಂದಿಗೆ ಕೇಂದ್ರಕ್ಕೆ ಭೇಟಿ ನೀಡಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಐಟಿಐ ಮತ್ತು ಪಿಯುಸಿ (ವಿಜ್ಞಾನ) ತೇರ್ಗಡೆಯಾದ ವಿದ್ಯಾರ್ಥಿಗಳು 2ನೇ ವರ್ಷಕ್ಕೆ ನೇರ ಪ್ರವೇಶ ಪಡೆಯಬಹುದಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರ್ಜಲ ವೃದ್ಧಿಯೂ ಖಾತ್ರಿ

## ಉದ್ಯೋಗ ಖಾತ್ರಿ ದಿನಕ್ಕೆ 370 ರೂ./ ಚುರುಕು ಪಡೆದ ಸಮುದಾಯ ಕಾಮಗಾರಿಗಳು



**ಬೆಳಗಾವಿ ವಾರ್ತೆ ಗದಗ:** ತಾಲೂಕಿನ ವಿವಿಧ ಗ್ರಾಮಗಳಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಂದಕ ಬದು ನಿರ್ಮಾಣ ಮಾಡಲಾಗುತ್ತಿದೆ. ಇದರಿಂದ ಫಲವತ್ತಾದ ಮಣ್ಣು ಅದೇ ಜಮೀನಿನಲ್ಲಿಯೇ ಉಳಿಯುವುದರ ಜತೆಗೆ ಅಂತರ್ಜಲ ವೃದ್ಧಿಗೆ ಪೂರಕವಾಗಿದ್ದು ರೈತರಿಗೆ ವರದಾನವಾಗಿದೆ.

ಗದಗ ತಾಲೂಕು ಪಂಚಾಯತಿ ವ್ಯಾಪ್ತಿಯ ಚಿಕ್ಕಹಂದಿಗೋಳ, ಅಡವಿಸೋಮಾಪುರ, ಬಿಂಕದಕಟ್ಟಿ, ಲಕ್ಕುಂಡಿ, ಬೆಳಹೋಡ, ತಿಮ್ಮಾಪುರ, ಹುಯಿಲಗೋಳ, ಬೆಳದಡಿ, ಹರ್ತಿ, ನೀರಲಗಿ ಸೇರಿ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಸಮುದಾಯ ಕಾಮಗಾರಿಗಳು ಪ್ರಾರಂಭವಾಗಿದ್ದು, ನಿತ್ಯ ಸಾವಿರಕ್ಕೂ ಹೆಚ್ಚು ಜನರು ಕೆಲಸದಲ್ಲಿ ತೊಡಗಿದ್ದಾರೆ.

ಎರಡು ಬಾರಿ ಹಾಜರಾತಿ ಕಡ್ಡಾಯ: ಉದ್ಯೋಗ ಖಾತ್ರಿ ಯೋಜನೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಕೆಲಸಕ್ಕೆ ಬರುವ ಕೂಲಿಕಾರರ ಹಾಜರಾತಿ ಪಡೆಯಲು ಕೇಂದ್ರ ಸರ್ಕಾರ ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ತಂತ್ರಾಂಶ ಅಭಿವೃದ್ಧಿ ಪಡಿಸಿದೆ. ದಿನಕ್ಕೆ ಎರಡು ಬಾರಿ ಹಾಜರಾತಿ ಹಾಕುವುದು ಕಡ್ಡಾಯವಿದೆ. ಮುಖಚಹರೆ ಆಧಾರದ ಮೂಲಕ ಹಾಜರಾತಿಯನ್ನು ಇಂದೀಕರಿಸಿ ತಂತ್ರಾಂಶದಲ್ಲಿ ದಾಖಲಿಸಲಾಗುತ್ತದೆ.

ಸಮಾನ ಕೂಲಿ: ಎನ್‌ಆರ್‌ಇಜಿಎ ಯೋಜನೆಯಡಿ ಮಹಿಳೆ, ಪುರುಷ ಎಂಬ ಭೇದವಿಲ್ಲದೆ ಎಲ್ಲರಿಗೂ ದಿನಕ್ಕೆ 370 ರೂ.ಗೆ ಕೂಲಿ ಹಣ ನೀಡಲಾಗುತ್ತದೆ. ಸರಿಯಾದ ಅಳತೆಯಲ್ಲಿ ಕಂದಕ ಬದು ನಿರ್ಮಾಣ ಮಾಡದಾಗ ಮಾತ್ರ ಪೂರ್ಣ ಪ್ರಮಾಣದ ಕೂಲಿ ಹಣ ದೊರೆಯಲಿದೆ. ನೇರವಾಗಿ ಕೂಲಿಕಾರರ ಉಳಿತಾಯ ಖಾತೆಗೆ ಪಾವತಿಯಾಗಲಿದೆ.

ತಮ್ಮದೇ ಕುಟುಂಬ ಸದಸ್ಯರು ಕೂಡಿಕೊಂಡು ಕೆಲಸ ಮಾಡಿ ಹಣ ಪಡೆಯಬಹದಾಗಿದೆ. ಇದರಿಂದ ಕುಟುಂಬದ ಸಣ್ಣ–ಪುಟ್ಟ ಅಗತ್ಯತೆ, ಮಕ್ಕಳ ಮುಂದಿನ ವ್ಯಾಸಂಗಕ್ಕೆ, ಬಳಕೆ ಮಾಡಿಕೊಳ್ಳಬಹುದಾಗಿದೆ. ಜೊತೆಗೆ ಮುಂಗಾರು ಬೆಳೆ ಬೆಳೆಯಲು ಗೊಬ್ಬರ, ಬೀಜ ಮತ್ತು ಜಮೀನಿನ ಇನ್ನಿತರ ಕೆಲಸ ಕಾರ್ಯಗಳಿಗೆ ಇದನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ.

ಮಣ್ಣು ನೀರು ಸಂರಕ್ಷಣೆ: ರೈತರು ತಮ್ಮ ಜಮೀನಿನಲ್ಲಿ ಬದು ನಿರ್ಮಾಣ ಮಾಡಿಕೊಳ್ಳುವುದರಿಂದ ಅಂತರ್ಜಲ ಪ್ರಮಾಣ ಹೆಚ್ಚಾಗಲಿದೆ. ಬದು ನಿರ್ಮಾಣದಿಂದ ಜಮೀನಿನಲ್ಲಿಯ ಮಣ್ಣು ಕೊಚ್ಚಿ ಹೋಗದೆ ಗುಂಡಿಗಳಲ್ಲಿಯೇ ಸಂಗ್ರಹವಾಗಲಿದೆ. ಮಳೆಯಾದಾಗ ಹೆಚ್ಚುವರಿ ನೀರು ಹರಿದು ಕೊಚ್ಚಿ ಹೋಗದಂತೆ ಬದುವಿನಲ್ಲಿ ಮಣ್ಣಿನ ಏರಿ ಹಾಕುವುದರಿಂದ ಫಲವತ್ತಾದ ಮಣ್ಣು ಜಮೀನಿನಲ್ಲಿಯೇ ಉಳಿಯಲಿದೆ. ಜತೆಗೆ ಅಂತರ್ಜಲ ಪ್ರಮಾಣವು ವೃದ್ಧಿಯಾಗಲಿದೆ. ರೈತರು ಇದರಿಂದ ಉತ್ತಮ ಇಳುವರಿಯನ್ನು ಪಡೆಯ ಬಹುದಾಗಿದೆ. 10 ಅಡಿ ಉದ್ದ, 5 ಅಡಿ ಅಗಲ, 2 ಅಡಿ ಆಳದ ಕಂದಕಕ್ಕೆ ಅವಕಾಶವಿದೆ. ಪ್ರತಿ ಕಂದಕವೂ ಅಂದಾಜು 2700 ಲೀಟರ್ ನೀರು ಹಿಡಿದಿಡುವ ಸಾಮರ್ಥ್ಯ ಹೊಂದಿರುತ್ತವೆ.

ತಾಲೂಕಿನ ಗ್ರಾಮೀಣ ಜನರಿಗೆ ಅವರ ಗ್ರಾಮದಲ್ಲಿಯೇ ಉದ್ಯೋಗ ನೀಡಲು ಮನರೇಗಾ ಯೋಜನೆಯಡಿ ಕೆಲಸ ನೀಡಲು ಸಮುದಾಯ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಇದರಿಂದ ಗ್ರಾಮೀಣರು ಉದ್ಯೋಗ ಅರಿಸಿ ವಲಸೆ ಹೋಗುವುದನ್ನು ನಿಲ್ಲಿಸಿ ತಮ್ಮ ಗ್ರಾಮದಲ್ಲಿಯೇ ಉದ್ಯೋಗ ಖಾತ್ರಿಯಲ್ಲಿ ಕೆಲಸ ಪಡೆಯಬಹುದಾಗಿದೆ.

ಗದಗ ತಾಲೂಕಿನ ಚಿಕ್ಕಹಂದಿಗೋಳ ಗ್ರಾಮ ಪಂಚಾಯತಿಯ ಶಾಗೋಟಿ ಗ್ರಾಮದಲ್ಲಿ ಸಮುದಾಯ ಬದು ನಿರ್ಮಾಣ ಕೆಲಸಕ್ಕೆ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ರಾಜ್ಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಅವರು ಇತ್ತೀಚೆಗೆ ಚಾಲನೆ ನೀಡಿದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜನಗಿ, ಸಹಾಯಕ ನಿರ್ದೇಶಕರಾದ (ಉಖಾ) ಕುಮಾರ ಪೂಜಾರ, ಗ್ರಾಪಂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಗ್ರಾಮದ ಹಿರಿಯರು ಸೇರಿ ಇತರರಿದ್ದರು.

> "ಬದು ನಿರ್ಮಾಣ ಮಾಡಿಕೊಳ್ಳುವುದರಿಂದ ಮಳೆಗಾಲದಲ್ಲಿ ಆಗುವ ಅನುಕೂಲಗಳ ಕುರಿತು ರೈತರಿಗೆ ಮಾಹಿತಿ ನೀಡಲಾಗಿದೆ. ಮಣ್ಣು ಮತ್ತು ನೀರು ಸಂರಕ್ಷಣೆಗೆ ಇದು ಉತ್ತಮ ಯೋಜನೆ ಆಗಿದೆ. ಇದರಿಂದ ರೈತರ ಜಮೀನಿನ ಫಲವತ್ತತೆ ಹೆಚ್ಚಾಗುವುದರ ಜೊತೆಗೆ ಸಣ್ಣ– ಅತಿ ಸಣ್ಣ ರೈತರು ದಿನಕ್ಕೆ 370 ರೂ. ಕೂಲಿ ಪಡೆಯ ಬಹುದಾಗಿದೆ."
>
> **– ಡಾ. ಎಚ್.ಎಸ್. ಜನಗಿ,**
> **ಕಾರ್ಯನಿರ್ವಾಹ ಅಧಿಕಾರಿಗಳು ತಾಪಂ ಗದಗ**

> "ತಾಲೂಕಿನ ಬಹುತೇಕ ಗ್ರಾಮ ಪಂಚಾಯಿತಿ ಹಾಗೂ ಗ್ರಾಮಗಳಲ್ಲಿ ಬದು ನಿರ್ಮಾಣ ಹಾಗೂ ಹಳ್ಳ ಹೂಳೆತ್ತುವ ಕಾಮಗಾರಿ ಆರಂಭಿಸಲಾಗಿದೆ. ಎನ್‌ಎಂಎಂಎಸ್ ತಂತ್ರಾಂಶದ ಮೂಲಕ ಎರಡು ಬಾರಿ ಹಾಜರಾತಿ ಹಾಕುವುದು ಕಡ್ಡಾಯವಾಗಿದೆ. ಅಳತೆಗನುಸಾರ ಕೆಲಸ ಮಾಡಿದಾಗ ಮಾತ್ರ ಪ್ರತಿ ವ್ಯಕ್ತಿಗೆ 370ರೂ. ಸಮಾನವಾಗಿ ಕೂಲಿ ನೀಡಲಾಗುತ್ತದೆ."
>
> **_ ಕುಮಾರ ಪೂಜಾರ**
> **ಸಹಾಯಕ ನಿರ್ದೇಶಕರು (ಉಖಾ) ತಾಪಂ ಗದಗ**

# ಸನ್ಮಾನ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ದಾದಿಯರ ದಿನಾಚರಣೆಯ ಅಂಗವಾಗಿ ಪತ್ರಕರ್ತ ಶಿವಲಿಂಗಯ್ಯ ಹೊತ್ತಿಗೆ ಮಠ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ವೈದ್ಯಾಧಿಕಾರಿ ಶ್ರೀಕಾಂತ್ ಕಾಟೇ ವಾಲೆ ಪತ್ರಕರ್ತ ನಾಗರಾಜ ಹಣಗಿ ಅವರು ದಾದಿಯರ ಸೇವಾ ಮನೋಭಾವ ಮತ್ತು ಸಮರ್ಪಣ ಭಾವನೆ ಅತ್ಯಂತ ಶ್ಲಾಘನೀಯ.

ದಾದಿಯರು ಎಂತಹದೇ ಕಠಿಣ ಸಂದರ್ಭದಲ್ಲಿ ರೋಗಿಗಳ ಆರೈಕೆ ಮಾಡುವುದು ಮತ್ತು ಅನೇಕ ಕಠಿಣ ಸಂದರ್ಭಗಳಲ್ಲಿ ಅದರಲ್ಲೂ ವಿಶೇಷವಾಗಿ ಕೋವಿಡ್ನಂತ ಸಂದರ್ಭದಲ್ಲಿ ತಮ್ಮ ಜೀವನದ ಹಂಗು ತೊರೆದು ಸೇವೆ ಮಾಡಿದ್ದು ಒಂದು ಇತಿಹಾಸ ಎಂದು ಪ್ರಶಂಶಿಸಿದರು ಸಮಾಜ ಇಂತಹ ಜನರನ್ನು ಗುರುತಿಸಿ , ಸನ್ಮಾನಿಸುವುದು ಅತ್ಯಂತ ಸೂಕ್ತವಾದದ್ದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರವೀಣ್ ಸಜ್ಜನ್, ಸುನಿಲ್ ಚೌಹಾನ್, ವಿಜಯ್ ಕುಮಾರ ಮಾಂಡ್ರೆ, ಸುನೀತಾ ನಂದಣ್ಣವರ, ವರಲಕ್ಷ್ಮಿ ಜನಿವಾರದ, ಶ್ರೀಶೈಲ್ ಫಕೀರಶೆಟ್ಟಿ, ಲಕ್ಷ್ಮಿ ಡೊಳ್ಳಿನ, ಪತ್ರಕರ್ತರಾದ ಅಶೋಕ ಸೊರಟೂರ, ದಿಗಂಬರ್ ಪೂಜಾರ, ಶಿವಲಿಂಗಯ್ಯ ಹೊತ್ತಿಗೆಮಠ ಇದ್ದರು.

# ಹಳ್ಳಿಕೇರಿ ಗ್ರಾಪಂ ಗ್ರಂಥಾಲಯಕ್ಕೆ ಭೇಟಿ, ವೀಕ್ಷಣೆ



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯ ಮುಂಡರಗಿ ತಾಲೂಕಿನ ಹಳ್ಳಿಕೇರಿ ಗ್ರಾಮದಲ್ಲಿರುವ 'ಅರಿವು ಕೇಂದ್ರ' ಗ್ರಾಮ ಪಂಚಾಯತ್ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಕ್ಕೆ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಭೇಟಿ ನೀಡಿ ಗ್ರಂಥಾಲಯವನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್. ಉಪವಿಭಾಗಧಿಕಾರಿ ಗಂಗಪ್ಪ ಎಂ,, ವಿವಿಧ ಇಲಾಖೆಯ ಅಧಿಕಾರಿಗಳು, ಊರಿನ ಹಿರಿಯರು ಉಪಸ್ಥಿತರಿದ್ದರು.

# ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ



**ಬೆಳಗಾವಿ ವಾರ್ತೆ ಗದಗ:** 2025–26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸ ಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶುಕ್ರವಾರ 2026 ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸೂರ್ಯಕಾಂತಿ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 04 ಕ್ವಿಂಟಲ್‌ನಂತೆ ಗರಿಷ್ಟ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಖರೀದಿಸಲು ಹಾಗೂ ಸೂರ್ಯಕಾಂತಿ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಸುಧಾ ಆರ್ ಬಂಡಿ ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 7721 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗ ಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 50 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 60 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ ಕೇಂದ್ರದಿಂದ ಎನ್.ಸಿ.ಸಿ.ಎಫ್ ಹಾಗೂ ರಾಜ್ಯದಲ್ಲಿ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆ.ಓ.ಎಫ್) ಬೇಂಗಳೂರು ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

**13 ಖರೀದಿ ಕೇಂದ್ರಗಳು:**

ಗದಗ ತಾಲೂಕು : OGCS :,ಹೊಂಬಳ,
ನರಗುಂದ : OGCS : ನರಗುಂದ, ಚಿಕ್ಕನರಗುಂದ, ಕಣಕಿಕೊಪ್ಪ,
PKPS : ಕೊಣ್ಣುರ, ಕಲಕೇರಿ
ಶಿರಹಟ್ಟಿ : : ರಣತೂರ
ಲಕ್ಷ್ಮೇಶ್ವರ : OGCS : ಶಿಗ್ಲಿ
ರೋಣ : OGCS : ಅಬ್ಬಿಗೇರಿ,
ಗಜೇಂದ್ರಗಡ : OGCS ನಿಡಗುಂದಿ,
ಮುಂಡರಗಿ : OGCS ಬರದೂರ, ಪೇಠಲೂರ, ಕಲಕೇರಿ



**ಬೆಳಗಾವಿ ವಾರ್ತೆ ಧಾರವಾಡ:** ಮೇ.12 ರಂದು ಬೆಳಿಗ್ಗೆ ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಜಿಲ್ಲಾ ಪಂಚಾಯತ ಕಚೇರಿ ಆವರಣದ ಎದುರುಗಡೆ ಇರುವ ಅಕ್ಕಾ ಕೆಫೆಗೆ ಭೇಟಿ ನೀಡಿ, ಕಾಫಿ ಸ್ವೀಕರಿಸಿ, ಅಕ್ಕಾ ಕೆಫೆ ತಂಡದವರಿಗೆ ಪ್ರೋತ್ಸಾಹಿಸಿದರು.



**ಬೆಳಗಾವಿ ವಾರ್ತೆ ಗದಗ :** ತಿಮ್ಮಾಪುರ ಗ್ರಾಮಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಅವರು ಗ್ರಾಮದ ಕೆರೆಗೆ ಖುದ್ದು ಭೇಟಿ ನೀಡಿ ಕೆರೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಗಂಗಪ್ಪ ಎಂ, ಸಿ.ಆರ್ ಮುಂಡರಗಿ, ಊರಿನ ಹಿರಿಯರು ಉಪಸ್ಥಿತರಿದ್ದರು.

## ಹೊನ್ನಾಪೂರ ಗ್ರಾಮದಲ್ಲಿ ನರೇಗಾ ಕಾಮಗಾರಿಗೆ ಇಓ ಚಂದ್ರಶೇಖರ ಬಿ ಕಂದಕೂರ ಭೇಟಿ

# ಗುಣಮಟ್ಟದ ಕೆಲಸ ಮಾಡಿದರೆ ನಿರಂತರ ಉದ್ಯೋಗ

**ಬೆಳಗಾವಿ ವಾರ್ತೆ ರೋಣ :** ತಾಲೂಕಿನ ಸವಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹೊನ್ನಾಪೂರ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ನಡೆಯುತ್ತಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿಗೆ ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ ಕಂದಕೂರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.



ಕಾಮಗಾರಿ ಸ್ಥಳದಲ್ಲಿ ಕೆಲಸದ ಪ್ರಗತಿ, ಗುಣಮಟ್ಟ ಹಾಗೂ ಕೂಲಿಕಾರರಿಗೆ ಕಲ್ಪಿಸಲಾಗುತ್ತಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದ ಅವರು, ಸರ್ಕಾರದ ಮಾರ್ಗಸೂಚಿ ಅನುಸಾರ ಕೂಲಿಕಾರರು ಕಡ್ಡಾಯವಾಗಿ ಅಳತೆಗೆ ತಕ್ಕಂತೆ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಬಿಸಿಲಿನ ತಾಪಮಾನ ಹೆಚ್ಚುತ್ತಿರುವ ಹಿನ್ನೆಲೆ ಆರೋಗ್ಯದ ದೃಷ್ಟಿಯಿಂದ ಎಲ್ಲರೂ ಮುಂಜಾನೆ ಬೇಗ ಕೆಲಸಕ್ಕೆ ಹಾಜರಾಗಿ ಮಧ್ಯಾಹ್ನದೊಳಗೆ ಕೆಲಸ ಮುಗಿಸಿಕೊಳ್ಳುವಂತೆ ಸಲಹೆ ನೀಡಿದರು.ಈ ವೇಳೆ ಕೂಲಿಕಾರರು ಗ್ರಾಮದಲ್ಲಿ ನಿರಂತರವಾಗಿ ನರೇಗಾ ಕಾಮಗಾರಿಗಳನ್ನು ಆರಂಭಿಸಿ ಉದ್ಯೋಗಾವಕಾಶ ಕಲ್ಪಿಸುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಕಾರ್ಯ ನಿರ್ವಾಹಕ ಅಧಿಕಾರಿಗಳು, ಗುಣಮಟ್ಟದ ಹಾಗೂ ನಿಯಮಾನುಸಾರ ಕೆಲಸ ಮಾಡಿದಲ್ಲಿ ನಿರಂತರವಾಗಿ ಕೆಲಸ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಪರಿಶೀಲನೆ ಸಂದರ್ಭದಲ್ಲಿ ಕೂಲಿಕಾರರು ಹಾಗೂ ಸಿಬ್ಬಂದಿಗೆ ಹಲವು ಪ್ರಮುಖ ಸೂಚನೆಗಳನ್ನು ನೀಡಲಾಯಿತು. ಪ್ರತಿದಿನ ಕಡ್ಡಾಯವಾಗಿ ಎರಡು ಬಾರಿ ಎನ್‌ಎಂಎಂಎಸ್ (NMMS) ಆಯಪ್ ಮೂಲಕ ಹಾಜರಾತಿ ದಾಖಲಿಸಬೇಕು ಎಂದು ತಿಳಿಸಲಾಯಿತು. ಕಾಯಕ ಬಂಧುಗಳು ತಮ್ಮ ವ್ಯಾಪ್ತಿಯ ಕೂಲಿಕಾರರಿಗೆ ಪ್ರತಿದಿನ ಕೆಲಸದ ಅಳತೆಯ ಕುರಿತು ಮಾಹಿತಿ ನೀಡಿ, ಸರಿಯಾದ ರೀತಿಯಲ್ಲಿ ಕೆಲಸ ನಿರ್ವಹಿಸಲು ಮಾರ್ಗದರ್ಶನ ನೀಡುವಂತೆ ಸೂಚಿಸಲಾಯಿತು.

ಎನ್‌ಎಂಆರ್ ತೆಗೆದುಕೊಂಡ ಕೂಲಿಕಾರರು ಕಡ್ಡಾಯವಾಗಿ ಕಾಮಗಾರಿ ಸ್ಥಳಕ್ಕೆ ಹಾಜರಾಗಿ ಕೆಲಸ ನಿರ್ವಹಿಸಬೇಕು ಎಂದು ಅಧಿಕಾರಿಗಳು ಸೂಚಿಸಿದರು.

ನರೇಗಾ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಬದು ನಿರ್ಮಾಣ ಕಾಮಗಾರಿಗಳು ಗ್ರಾಮೀಣ ಭಾಗದಲ್ಲಿ ನೀರು ಸಂರಕ್ಷಣೆ, ಮಣ್ಣಿನ ಸದ್ಬಳಕೆ ಹಾಗೂ ರೈತರ ಭೂಮಿಯ ಅಭಿವೃದ್ಧಿಗೆ ಸಹಕಾರಿಯಾಗುತ್ತಿದ್ದು, ಗ್ರಾಮಾಭಿವೃದ್ಧಿಗೆ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಡಿಓ, ಟಿಐಇಸಿ, ಡಿಇಓ, ಜಿಕೆಎಂ , ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯ ಹಳ್ಳಿಕೆರೆ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಅವರು ಭೇಟಿ ನೀಡಿ, ಕೇಂದ್ರದ ಕಾರ್ಯವೈಖರಿ ಹಾಗೂ ಮಕ್ಕಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಉಪವಿಭಾಗಧಿಕಾರಿ ಗಂಗಪ್ಪ ಎಂ, ಜಿಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು ಊರಿನ ಹಿರಿಯರು ಉಪಸ್ಥಿತರಿದ್ದರು.

## ಕುಡಿಯುವ ನೀರು ಸಮರ್ಪಕ ಪೂರೈಕೆಗೆ ಮೊದಲ ಆದ್ಯತೆ: ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್

# ಬಿತ್ತನೆ ಬೀಜ–ಗೊಬ್ಬರ ಪೂರೈಕೆ, ಗ್ಯಾಸ್ ಸಿಲಿಂಡರ್ ವಿತರಣೆ ಹಾಗೂ ಆರೋಗ್ಯ ರಕ್ಷಣೆಯಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ

**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡಲು ಪ್ರಥಮ ಆದ್ಯತೆ ನೀಡಬೇಕು ಎಂದು ರಾಜ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾದ ಡಾ. ಎಂ.ವಿ. ವೆಂಕಟೇಶ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ವರ್ಷಕ್ಕಿಂತ ಈ ಬಾರಿ ಜಿಲ್ಲೆಯಲ್ಲಿ ಅಧಿಕ ಉಷ್ಣಾಂಶ ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಎಲ್ಲ ತಾಲ್ಲೂಕು ಪಂಚಾಯತಿ ಇಓ ಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆ ಆಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಅನಗತ್ಯ ನೀರಿನ ಪೋಲು ಹಾಗೂ ಅಪವ್ಯಯ ತಡೆಗಟ್ಟಿ ವರ್ಷಪೂರ್ತಿ ಸಮರ್ಪಕ ನೀರು ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ತಿಮ್ಮಾಪೂರ ಗ್ರಾಮ ಸೇರಿದಂತೆ ನೀರು ಸರಬರಾಜಿನಲ್ಲಿ ಸಮಸ್ಯೆ ಇರುವ ಪ್ರದೇಶಗಳನ್ನು ಗುರುತಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇರುವ ಗ್ರಾಮಗಳು ಹಾಗೂ ವಾರ್ಡುಗಳನ್ನು ಗುರುತಿಸಿ ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ಇರುವ ಕೆರೆಗಳಲ್ಲಿ ನೀರು ಸಂಗ್ರಹಕ್ಕೆ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿರುವ ಆರ್‌ಓ ಘಟಕಗಳ ಸಮರ್ಪಕ ನಿರ್ವಹಣೆ ಕುರಿತು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು ಎಂದು ಡಾ. ಎಂ ವಿ ವೆಂಕಟೇಶ ಸೂಚಿಸಿದರು.

ಮುಂಗಾರು ಹಂಗಾಮು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆ ಸಮರ್ಪಕವಾಗಿ ನಡೆಯಬೇಕು, ಯಾವುದೇ ಕಾರಣಕ್ಕೂ ಬೀಜ ಹಾಗೂ ಗೊಬ್ಬರ ವಿತರಣೆಯಲ್ಲಿ ಅವ್ಯವಸ್ಥೆ ನಡೆಯಬಾರದು ಎಂದು ಎಚ್ಚರಿಸಿದರು.

ತೋಟಗಾರಿಕೆ ಬೆಳೆಗಳ ಕ್ಷೇತ್ರ ವಿಸ್ತರಣೆಗೆ ಗದಗ ಜಿಲ್ಲೆಯಲ್ಲಿ ಹೆಚ್ಚಿನ ಅವಕಾಶಗಳಿದ್ದು, ರೈತರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಸೌಲಭ್ಯ ಒದಗಿಸಿ ಕ್ಷೇತ್ರ ವಿಸ್ತರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಿಳಿಸಿದರು.

ಜಿಲ್ಲೆಯಲ್ಲಿ ತೀವ್ರ ಬಿಸಿಲಿನ ಪರಿಸ್ಥಿತಿ ಇರುವುದರಿಂದ ಜನಸಾಮಾನ್ಯರು, ವೃದ್ಧರು ಹಾಗೂ ಮಕ್ಕಳ ಆರೋಗ್ಯ ರಕ್ಷಣೆಗೆ ವಿಶೇಷ ಗಮನ ಹರಿಸಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಎಲ್ಲ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳು ನಿರಂತರ ಲಭ್ಯವಿದ್ದು, ತುರ್ತು ಚಿಕಿತ್ಸಾ ವ್ಯವಸ್ಥೆ ಸಮರ್ಪಕವಾಗಿರಬೇಕು ಎಂದರು.

ಆಸ್ಪತ್ರೆಗಳಲ್ಲಿ ಅಗತ್ಯ ಔಷಧಿ, ವೈದ್ಯಕೀಯ ಸೌಲಭ್ಯಗಳು ಲಭ್ಯವಿರುವಂತೆ ನೋಡಿಕೊಳ್ಳಬೇಕು. ಜೀವ ರಕ್ಷಣೆಗೆ ಆದ್ಯತೆ ನೀಡಿ ಆರೋಗ್ಯ ಸೇವೆ ಸುಧಾರಣೆಗೆ ಶ್ರಮಿಸಬೇಕು ಎಂದು ಸೂಚಿಸಿದರು.

ವಸತಿ ಶಾಲೆಗಳು ಕೇವಲ ತಿಂಡಿ–ಊಟ ನೀಡುವ ಕೇಂದ್ರಗಳಾಗಬಾರದು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ವಸತಿ ಶಾಲೆಗಳು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಇಂಡೆಂಟ್ ಬುಕ್ ಸರಿಯಾಗಿ ನಿರ್ವಹಿಸಿ ಮಕ್ಕಳಿಗೆ ಅಗತ್ಯ ಸೌಲಭ್ಯ ಕಲ್ಪಿಸಬೇಕು ಎಂದು ಡಾ. ಎಂ ವಿ ವೆಂಕಟೇಶ್ ಹೇಳಿದರು.

ಅಧಿಕಾರಿಗಳು ನಿರಂತರವಾಗಿ ಶಾಲೆಗಳಿಗೆ ಭೇಟಿ ನೀಡಿ ಸಮಸ್ಯೆಗಳನ್ನು ಪರಿಹರಿಸಬೇಕು. ನಿರ್ಲಕ್ಷ್ಯ ಕಂಡುಬಂದಲ್ಲಿ ಶಿಸ್ತು ಕ್ರಮ ಅನಿವಾರ್ಯವಾಗುತ್ತದೆ ಎಂದು ಇದೇ ವೇಳೆ ಎಚ್ಚರಿಸಿದರು.

ಗದಗ ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದಿರುವ 219 ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ವಿಶೇಷ ಅಭಿಯಾನ ರೂಪಿಸಬೇಕು ಎಂದು ಸೂಚಿಸಿದರು. ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು ಎಂದರು.



ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಜಿಲ್ಲೆ 16ನೇ ಸ್ಥಾನದಲ್ಲಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು. ಶಿಕ್ಷಕರ ಕೊರತೆ ಇರುವ ಕಡೆ ಅತಿಥಿ ಶಿಕ್ಷಕರ ಸೇವೆ ಪಡೆಯುವಂತೆ ಸೂಚಿಸಿದರು. ಪಿಯುಸಿ ಫಲಿತಾಂಶ ಅತ್ಯಂತ ಕಳಪೆ ಮಟ್ಟದಲ್ಲಿದ್ದು, ಅಧಿಕಾರಿಗಳ ಪ್ರಯತ್ನ ಸಮರ್ಪಕವಾಗಿ ಕಾಣುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಉತ್ತಮವಾಗಿದ್ದು, ಯಾವುದೇ ಅರ್ಹ ಫಲಾನುಭವಿಗಳು ವಂಚಿತರಾಗಬಾರದು ಎಂದು ಹೇಳಿದರು.

ಗೃಹ ಬಳಕೆ ಹಾಗೂ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ಆಗುತ್ತಿರುವ ವಿಳಂಬ ಸರಿಪಡಿಸಬೇಕು. ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ಗ್ಯಾಸ್ ಸಿಲಿಂಡರ್ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಹೆಚ್ಚು ಹೆಚ್ಚು ಉದ್ಯೋಗ ಮೇಳಗಳನ್ನು ಆಯೋಜಿಸಿ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮ ಪಂಚಾಯತಿಗಳಲ್ಲಿ ಸಕಾಲ ಯೋಜನೆಯಡಿ ಬಾಕಿ ಇರುವ ಅರ್ಜಿಗಳನ್ನು ಆದ್ಯತೆಯ ಮೇರೆಗೆ ವಿಲೇವಾರಿ ಮಾಡಬೇಕು ಎಂದು ಜಿಲ್ಲಾ ಪಂಚಾಯತ ಆಡಳಿತಾಧಿಕಾರಿ ಡಾ. ಎಂ ವಿ ವೆಂಕಟೇಶ ತಿಳಿಸಿದರು.

ಕೆರೆಗಳ ಸಂರಕ್ಷಣೆ ಮೂಲಕ ನೀರಿನ ಮೂಲಗಳನ್ನು ಶಾಶ್ವತವಾಗಿ ಉಳಿಸಬೇಕು ಎಂದು ಸೂಚಿಸಿದ ಅವರು, ಕೆರೆಗಳು ಪ್ರಾಣಿ–ಪಕ್ಷಿಗಳು ಸೇರಿದಂತೆ ಎಲ್ಲ ಜೀವಿಗಳಿಗೂ ಜೀವಜಲದ ಮೂಲವಾಗಿವೆ ಅವುಗಳ ರಕ್ಷಣೆ ಎಲರದ್ದು ಎಂದರು.

ಪ್ರತಿ ಗ್ರಾಮ ಹಾಗೂ ವಾರ್ಡ್ ಮಟ್ಟದಲ್ಲಿ ಕಸ ನಿರ್ವಹಣೆ ಸಮರ್ಪಕವಾಗಿ ನಡೆಯಬೇಕು. ಹಸಿ ಕಸ ಮತ್ತು ಒಣ ಕಸವನ್ನು ಮೂಲದಲ್ಲೇ ವಿಂಗಡಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ವ್ಯವಸ್ಥೆ ಜಾರಿಗೆ ತರಬೇಕು ಎಂದು ಸೂಚಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಯ ಯೋಜನೆಗಳ ಪ್ರಗತಿ, ಸಮಸ್ಯೆಗಳು ಹಾಗೂ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಗಂಗಾ ಕಲ್ಯಾಣ ಯೋಜನೆ ಕುರಿತು ಮಾಹಿತಿ ನೀಡಿದ ನಿಗಮದ ಅಧಿಕಾರಿಗಳು, ಯೋಜನೆಯಡಿ ಮಂಜೂರಾಗಿರುವ 22 ಫಲಾನುಭವಿಗಳ ಬೋರ್‌ವೆಲ್‌ಗಳಿಗೆ 500 ಮೀಟರ್‌ಗಿಂತ ಹೆಚ್ಚು ಅಂತರ ಇರುವ ಕಾರಣ ಹೆಸ್ಕಾಂ ವತಿಯಿಂದ ವಿದ್ಯುತ್ ಸಂಪರ್ಕ ನೀಡಲು ಸಾಧ್ಯವಿಲ್ಲ ಎಂದು ತಿಳಿಸಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು. ಅಂತಹ ಬೋರ್‌ವೆಲ್‌ಗಳಿಗೆ ಸೋಲಾರ್ ವ್ಯವಸ್ಥೆ ಅಳವಡಿಕೆ ಅಗತ್ಯವಿದ್ದು, ಇದರಿಂದ ಫಲಾನುಭವಿಗಳಿಗೆ ಯೋಜನೆ ಸೌಲಭ್ಯ ದೊರಕುವಲ್ಲಿ ವಿಳಂಬ ಉಂಟಾಗುತ್ತಿದೆ ಎಂದು ವಿವರಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ ಮಾತನಾಡಿ, ಜಿಲ್ಲೆಯಲ್ಲಿ ಸದ್ಯ 123 ಅಪೌಷ್ಟಿಕ ಮಕ್ಕಳು ಗುರುತಿಸಲ್ಪಟ್ಟಿದ್ದಾರೆ. ಅಪೌಷ್ಟಿಕ ಮಕ್ಕಳ ಆರೋಗ್ಯ ಸುಧಾರಣೆಗೆ ಅಗತ್ಯ ಪೌಷ್ಟಿಕ ಆಹಾರ ಹಾಗೂ ಆರೈಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ 126 ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಅಗತ್ಯವಿದ್ದು, ಈ ಕುರಿತು ಕ್ರಮ ವಹಿಸಲಾಗುತ್ತಿದೆ. ಉಳಿದಂತೆ ಇಲಾಖೆಯ ಎಲ್ಲಾ ಕಾರ್ಯಕ್ರಮಗಳು ಸುಗಮವಾಗಿ ನಡೆಯುತ್ತಿವೆ ಎಂದು ಮಾಹಿತಿ ನೀಡಿದರು.

ನಗರಾಭಿವೃದ್ಧಿ ಯೋಜನಾ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 9 ನಗರ ಸ್ಥಳೀಯ ಸಂಸ್ಥೆಗಳಿದ್ದು, ಗದಗ–ಬೆಟಗೇರಿ ನಗರಕ್ಕೆ ಪ್ರತಿ 8 ದಿನಕ್ಕೊಮ್ಮೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಉಳಿದ ದಿನಗಳಲ್ಲಿ ಸಾರ್ವಜನಿಕರ ನಿತ್ಯ ಬಳಕೆಗೆ ಬೋರ್‌ವೆಲ್ ಹಾಗೂ ಆರ್‌ಓ ಘಟಕಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಹೇಳಿದರು.

ಪಶುಸಂಗೋಪನೆ ಇಲಾಖೆ ಡಿಡಿ ಡಾ. ಎಚ್.ಬಿ. ಹುಲಗಣ್ಣನವರ, ಜಿಲ್ಲೆಯಲ್ಲಿ ಸದ್ಯ ಜಾನುವಾರುಗಳಿಗೆ ಮೇವಿನ ಕೊರತೆ ಇಲ್ಲ. ಮುಂದಿನ ದಿನಗಳಲ್ಲಿ ಸಮಸ್ಯೆ ಎದುರಾದಲ್ಲಿ 31 ಕಡೆ ಮೇವು ಬ್ಯಾಂಕ್ ಆರಂಭಿಸಲು ಸ್ಥಳಗಳನ್ನು ಗುರುತಿಸಲಾಗಿದೆ ಎಂದು ಹೇಳಿದರು.

ಕೃಷಿ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿ ಹೆಸರು, ಮುಸುಕಿನ ಜೋಳ ಹಾಗೂ ಸೂರ್ಯಕಾಂತಿ ಪ್ರಮುಖ ಬೆಳೆಗಳಾಗಿವೆ. ಮುಂಗಾರು ಹಂಗಾಮಿನಲ್ಲಿ 3.14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಮುಂಗಾರು ಹಂಗಾಮಿಗೆ ಅಗತ್ಯವಿರುವ ಯೂರಿಯಾ, ಡಿಎಪಿ ಹಾಗೂ ಕಾಂಪ್ಲೆಕ್ಸ್ ಗೊಬ್ಬರಗಳ ಲಭ್ಯತೆ ಕುರಿತು ಮಾಹಿತಿ ನೀಡಿದ ಅವರು, ಸದ್ಯ 7,468 ಮೆಟ್ರಿಕ್ ಟನ್ ಗೊಬ್ಬರ ಮಾರಾಟವಾಗಿದ್ದು, 15,948 ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನು ಉಳಿದಿದೆ ಎಂದು ತಿಳಿಸಿದರು. ರೈತರಿಗೆ ಗೊಬ್ಬರ ಹಾಗೂ ಬೀಜ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಎಸಿ ಗಂಗಪ್ಪ ಎಂ, ಡಿಎಸ್ ಸಿ ಆರ್ ಮುಂಡರಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶಿಲ್ದಾರರು, ತಾಪಂ ಇಓಗಳು ಉಪಸ್ಥಿತರಿದ್ದರು.

"ಈಗಾಗಲೇ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಸಭೆ ನಡೆಸಿ, ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಸಮರ್ಪಕ ನೀರು ಪೂರೈಕೆ, ಆರ್‌ಓ ಘಟಕಗಳ ನಿರ್ವಹಣೆ ಹಾಗೂ ಸಮಸ್ಯಾತ್ಮಕ ಪ್ರದೇಶಗಳ ನಿರಂತರ ಮೇಲ್ವಿಚಾರಣೆಗೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಧಿಕ ಉಷ್ಣಾಂಶ ಹಿನ್ನೆಲೆಯಲ್ಲಿ ಜನರ ಆರೋಗ್ಯ ರಕ್ಷಣೆಗೂ ವಿಶೇಷ ಗಮನ ನೀಡಲಾಗುತ್ತಿದ್ದು, ಆಸ್ಪತ್ರೆಗಳಲ್ಲಿ ಅಗತ್ಯ ಸೌಲಭ್ಯಗಳ ಲಭ್ಯತೆ ಖಚಿತಪಡಿಸಲಾಗಿದೆ. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಇಂದು ಸಭೆಯಲ್ಲಿ ನೀಡಿದ ಎಲ್ಲ ಸೂಚನೆಗಳನ್ನು ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು."

**– ಸಿ ಎನ್ ಶ್ರೀಧರ,**
**ಜಿಲ್ಲಾಧಿಕಾರಿಗಳು**

"ಗದಗ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡಲು ಮೊದಲ ಆದ್ಯತೆ ನೀಡಬೇಕು. ಮುಂಗಾರು ಹಂಗಾಮಿಗೆ ಅಗತ್ಯ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಅವ್ಯವಸ್ಥೆ ಆಗಬಾರದು. ಗ್ಯಾಸ್ ಸಿಲಿಂಡರ್ ಪೂರೈಕೆಯ ವಿಳಂಬ ಸರಿಪಡಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ಅಧಿಕ ಬಿಸಿಲಿನ ಪರಿಣಾಮದಿಂದ ಜನರ ಆರೋಗ್ಯ ರಕ್ಷಣೆಗೆ ಆರೋಗ್ಯ ಇಲಾಖೆ ವಿಶೇಷ ಗಮನ ಹರಿಸಬೇಕು,"

**– ಡಾ. ಎಂ ವಿ ವೆಂಕಟೇಶ್,**
**ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು**

# ಮೇ 16 ಕ್ಕೆ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ: ಭಿತ್ತಿ ಪತ್ರ ಬಿಡುಗಡೆ



**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಚರಿಸಲಾಗುವ ಮೇ 16 ರಂದು ಆಚರಿಸಲಾಗುವ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ್ ಅವರು ಭಿತ್ತಿ ಪತ್ರ ಬಿಡುಗಡೆಗೊಳಿಸಿದರು. ಈ ಸಂದರ್ಭ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ., ಜಿಲ್ಲಾ ಅನುಷ್ಠಾನಾಧಿಕಾರಿ ಡ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಆರ್‌ಸಿಎಚ್ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪ್ರಕಾಶ ವಿ., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಪ್ರಕಾಶ ಎಚ್., ಜಿಲ್ಲಾ ಸರ್ವೇಕ್ಷಣಾ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಗೋನಾಳ ಕುಮಾರಸ್ವಾಮಿ, ಕೊಪ್ಪಳ ಕಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಮಂಜುನಾಥ, ತಜ್ಞ ವೈದ್ಯರಾದ ಡಾ.ಈಶ್ವರ ಸವಡಿ, ಫಿಜಿಶಿಯನ್ ಡಾ.ಸಂಗನಬಸಪ್ಪ, ಡಾ.ಸೋಮಶೇಖರ ಕೆ., ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ಹಾಗೂ ವಿವಿಧ ತಾಲ್ಲೂಕುಗಳ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಟಣಕನಕಲ್ ಐಟಿಐ: ಮೇ 19 ರಂದು ಶಿಶಿಕ್ಷು ತರಬೇತಿಗೆ ಕ್ಯಾಂಪಸ್ ಸಂದರ್ಶನ

**ಬೆಳಗಾವಿ ವಾರ್ತೆ ಕೊಪ್ಪಳ:** ಟಣಕನಕಲ್‌ನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮೇ 19 ರಂದು ಬೆಳಿಗ್ಗೆ 9 ಗಂಟೆಗೆ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಪ್ರೈ.ಲಿ. ಬಿಡದಿ–ಬೆಂಗಳೂರು ಅವರ ವತಿಯಿಂದ ಐಟಿಐ ಪಾಸ್ ಆದ ಹಾಗೂ ಪ್ರಸ್ತುತ ಐಟಿಐ ಎರಡನೇ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ಶಿಶಿಕ್ಷು ತರಬೇತಿಗಾಗಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಸಂದರ್ಶನವನ್ನು ಟಣಕನಕಲ್ ಸಂಸ್ಥೆಯಲ್ಲಿ ಮಾತ್ರ ನಡೆಸುತ್ತಿರುವುದರಿಂದ ಜಿಲ್ಲೆಯ ಎಲ್ಲ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಾರ್ಥಿಗಳು ಈ ಅವಕಾಶದ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದೆ. ಆಸಕ್ತರು ಆಸಕ್ತರು ತಮ್ಮ ಆಧಾರ್ ಕಾರ್ಡ, ಫೋಟೋ, ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳ ಜೊತೆಗೆ 2 ಸೆಟ್ ಝೆರಾಕ್ಸ್ ಪ್ರತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೊಪ್ಪಳ (ಟಣಕನಕಲ್, ಕುಷ್ಟಗಿ ರಸ್ತೆ, ಕೊಪ್ಪಳ). ಮೊಬೈಲ್ ಸಂ:– 9449330436, 9448813422, 9945577155, 9742532353, 9945672606, & 9964780198 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆ

## ತಾಯಿ ಮತ್ತು ಶಿಶು ಮರಣ ಪ್ರಮಾಣ ಶೂನ್ಯಕ್ಕೆ ಇಳಿಸಿ: ಡಾ.ಸುರೇಶ ಬಿ.ಇಟ್ನಾಳ್

**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲೆಯಲ್ಲಿ ಹೆರಿಗೆ ಸಂದರ್ಭದಲ್ಲಿ ಉಂಟಾಗುವ ತಾಯಿ ಮತ್ತು ಶಿಶು ಮರಣ ಪ್ರಮಾಣ ದರವನ್ನು ಶೂನ್ಯಕ್ಕೆ ಇಳಿಸಿ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ್ ಅವರು ಹೇಳಿದರು.

ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಿಳೆ ಗರ್ಭಿಣಿ ಎಂದು ತಿಳಿದ ಕೂಡಲೇ ಆಕೆಗೆ ತಾಯಿ ಕಾರ್ಡ್ ನೀಡಲಾಗುತ್ತದೆ. ಅದರಲ್ಲಿ ಪ್ರತಿ ಮಾಹೆಯ ತಪಾಸಣೆ ಹಾಗೂ ಮಹಿಳೆಯ ಆರೋಗ್ಯದ ಕುರಿತು ವಿವರ ಇರುತ್ತದೆ. ಹೆರಿಗೆ ಸಂದರ್ಭ ತಾಯಿ ಕಾರ್ಡ್ ಮಹತ್ವದ್ದಾಗಿದ್ದು, ಹೆರಿಗೆ ಸಮಯದ ಗಂಭೀರ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಾಗುತ್ತದೆ. ಆದಾಗ್ಯೂ ಹೆರಿಗೆ ಸಂದರ್ಭ ಮಹಿಳೆಯ ರಕ್ತದೊತ್ತಡದಲ್ಲಿನ ಏರಿಳಿತಗಳಿಂದ ಸಾವಿನಂತಹ ದುರ್ಘಟನೆ ಸಂಭವಿಸುತ್ತವೆ. ಆದ್ದರಿಂದ ಪ್ರತಿ ಮಾಹೆ ಸಂಬಂಧಿಸಿದ ಆಶಾ ಕಾರ್ಯಕರ್ತೆಯರು ಗರ್ಭಿಣಿ ಮಹಿಳೆಯ ರಕ್ತದೊತ್ತಡ, ರಕ್ತಹೀನತೆ ಸಮಸ್ಯೆಗಳನ್ನು ಪರೀಕ್ಷಿಸಿ ವೈದ್ಯರಿಂದ ಸೂಕ್ತ ಔಷಧಿ ಒದಗಿಸಬೇಕು. ರಕ್ತಹೀನತೆ ಕೂಡ ಗರ್ಭಿಣಿ ಆರೋಗ್ಯಕ್ಕೆ ಮಾರಕವಾಗಬಲ್ಲದು. ಇದರಿಂದ ಹೆರಿಗೆ ಸಂದರ್ಭ ಸಾವು ಸಂಭವಿಸಬಹುದು. ಹೆರಿಗೆ ಸಂದರ್ಭ ಫಿಜಿಸಿಯನ್ ಕಡ್ಡಾಯವಾಗಿ ಇರಬೇಕು. ಗರ್ಭಿಣಿ ಕುಟುಂಬದವರೂ ಕೂಡ ಗರ್ಭಿಣಿಯ ಆರೋಗ್ಯ ಸ್ಥಿತಿಯ ಬಗ್ಗೆ ಯಾವುದೇ ಮುಚ್ಚು ಮರೆ ಇಲ್ಲದೆ ವೈದ್ಯರಿಗೆ ಮಾಹಿತಿ ನಿಡಬೇಕು. ಇದರಿಂದ ಅಗತ್ಯ ಚಿಕಿತ್ಸೆ ನೀಡಲು ವೈದ್ಯರಿಗೆ ಸಹಕಾರಿಯಾಗುತ್ತದೆ. ವೈದ್ಯರು ಸಹ ಯಾವುದೇ ತುರ್ತು ಪರಿಸ್ಥಿತಿಗೆ ಸಜ್ಜಾಗಿ ಹೆರಿಗೆ ಮಾಡಿಸಬೇಕು



ಎಂದು ಹೇಳಿದರು.

ಮಗು ಜನನದ ನಂತರ ಮಗು ಸಂಪೂರ್ಣ ಆರೋಗ್ಯವಾಗಿದ್ದಾಗಲೂ ಜನನದ ಒಂದು ಅಥವಾ ಎರಡು ದಿನಗಳ ನಂತರ ಮಗು ಸಾವನ್ನಪುತ್ತದೆ. ಇದಕ್ಕೆ ಕಾರಣಗಳಿರಲೇಬೇಕು. ವೈದ್ಯಕೀಯ ಕಾರಣಗಳು ಏನೇ ಇದ್ದರೂ ಅಗತ್ಯ ಸಮಯದಲ್ಲಿ ಸೂಕ್ತ ಚಿಕಿತ್ಸೆ ನೀಡುವ ಮೂಲಕ ಮಗುವಿನ ಪ್ರಾಣ ಉಳಿಸಬಹುದು. ಮಗುವಿನ ಜನನದ ನಂತರ ಕಂಡು ಬರುವ ಆರೋಗ್ಯ ಸಮಸ್ಯೆಗಳಿಗೆ ಕುಟುಂಬದವರು ಕಡ್ಡಾಯವಾಗಿ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ನೀಡಬೇಕು. ಮನೆ ವೈದ್ಯ ಅಥವಾ ಮನೆ ಮದ್ದು ನೀಡುವ ಸಾಹಸ ಮಡಬಾರದು. ಈ ಬಗ್ಗೆ ಹೆರಿಗೆಯ ನಂತರ ಮಹಿಳೆಯ ಕುಟುಂಬದವರಿಗೆ ವೈದ್ಯರು ತಿಳುವಳಿಕೆ ನೀಡಬೇಕು. ಜನನ ದಿನದಿಂದ ನಿಯಮಾನುಸಾರ ಮಗುವಿಗೆ ನಿಗದಿತ ಚುಚ್ಚುಮದ್ದುಗಳನ್ನು, ಲಸಿಕೆಗಳನ್ನು ಕಡ್ಡಾಯವಾಗಿ ಮಗುವಿಗೆ ಹಾಕಿಸಬೇಕು. ಈ ಬಗ್ಗೆ ತಾಯಿ ಕಾರ್ಡ್ನಲ್ಲಿ ದಾಖಲಿಸಬೇಕು ಎಂದು ಜಿಲ್ಲಾಧಿಕಾರಿಗಳು ವೈದ್ಯರಿಗೆ ಸೂಚಿಸಿದರು.

ಪಕ್ಕದ ಜಿಲ್ಲೆಗಳಿಂದ ಕೊನೆಯ ಹಂತದಲ್ಲಿ ಜಿಲ್ಲಾಸ್ಪತ್ರೆಗೆ ದಾಖಲಾಗಿ, ವೈದ್ಯರ ಪ್ರಯತ್ನದ ನಂತರವೂ ಹೆರಿಗೆ ಸಂದರ್ಭ ಮಹಿಳೆ ಮರಣ ಹೊಂದಿದರೂ ಅದು ಜಿಲ್ಲೆಯ ವ್ಯಾಪ್ತಿಗೆ ಬರುತ್ತದೆ. ಆದ್ದರಿಂದ ಅನ್ಯ ಜಿಲ್ಲೆಗಳಿಂದ ಇಲ್ಲಿಗೆ ಬರುವ ಗರ್ಭಿಣಿಯ ಆರೋಗ್ಯ ಸಂಬಂಧಿತ ವೈದ್ಯಕೀಯ ದಾಖಲೆಗಳನ್ನು ಮತ್ತು ಜಿಲ್ಲಾಸ್ಪತ್ರೆಗೆ ಶಿಫಾರಸ್ಸು ಮಾಡುವ ವೈದ್ಯರು ಈ ಬಗ್ಗೆ ಕರೆ ಮೂಲಕ ಇಲ್ಲಿನ ವೈದ್ಯರೊಂದಿಗೆ ಮಹಿಳೆಯ ಆರೋಗ್ಯ ತುರ್ತು ಪರಿಸ್ಥಿತಿ ಬಗ್ಗೆ ಮಾಹಿತಿ ನೀಡಬೇಕು. ಈ ಬಗ್ಗೆ ಪಕ್ಕದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ವೈದ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ ಚರ್ಚಿಸಬೇಕು ಹಾಗೂ ಸೂಕ್ತ ಮಾಹಿತಿ ನೀಡಬೇಕು. ಯಾವುದೇ ಜಿಲ್ಲೆಯ ಮಹಿಳೆಯಾದರೂ ಅವರ ಜೀವ ಉಳಿಸುವುದು ವೈದ್ಯರ ಮೊದಲ ಆದ್ಯತೆಯಾಗಬೇಕು. ಈ ಮೂಲಕ ತಾಯಿ ಮತ್ತು ಶಿಶುವಿನ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಬೇಕು ಎಂದು ಅವರು ಸೂಚನೆ ನೀಡಿದರು.

ಇನ್ನು ಸ್ವಲ್ಪ ದಿನಗಳಲ್ಲಿ ಮುಂಗಾರು ಆರಂಭವಾಗುತ್ತಿದ್ದು, ಮಳೆಗಾಲದಲ್ಲಿ ಹರಡುವ ಸಾಂಕ್ರಾಮಿಕ ರೋಗಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ. ಮಲೇರಿಯ, ಡೆಂಗ್ಯೂ, ಚಿಕುನ್‌ಗುನ್ಯಾ ದಂತಹ ಖಾಯಿಲೆಗಳಿಗೆ ಕಾರಣವಾಗುವ ಸೊಳ್ಳೆಗಳ ನಿರ್ಮೂಲನೆಗೆ ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಅಗತ್ಯ ಕ್ರಮ ವಹಿಸಿ. ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ. ಹಾವು ಕಡಿತ ಸಂದರ್ಭ ಕಡ್ಡಾಯವಾಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುವಂತೆ ತಿಳುವಳಿಕೆ ನೀಡಿ. ನಾಯಿ ಕಡಿತಕ್ಕೂ ನಿಗದಿತ ಲಸಿಕೆಗಳನ್ನು ಕಡ್ಡಾಯವಾಗಿ ಪಡೆಯಬೇಕು. ಇದರೊಂದಿಗೆ ಆರೋಗ್ಯ ರಕ್ಷಣೆಗೆ ಸಂಬಂಧಿಸಿದಂತೆ ಎಲ್ಲ ಅಗತ್ಯ ಮುನ್ನಚ್ಚರಿಕೆ ವಹಿಸಲು ಜಾಗೃತಿ ಕಾರ್ಯಕ್ರಗಳ ಮೂಲಕ ಜನರಲ್ಲಿ ಅರಿವು ಮೂಡಿಸಿ ಎಂದು ಜಿಲ್ಲಾಧಿಕಾರಿಗಳು ವೈದ್ಯರಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ., ಜಿಲ್ಲಾ ಅನುಷ್ಠಾನಾಧಿಕಾರಿ ಡ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಆರ್‌ಸಿಎಚ್ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪ್ರಕಾಶ ವಿ., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಪ್ರಕಾಶ ಎಚ್., ಜಿಲ್ಲಾ ಸರ್ವೇಕ್ಷಣಾ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಗೋನಾಳ ಕುಮಾರಸ್ವಾಮಿ, ಕೊಪ್ಪಳ ಕಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಮಂಜುನಾಥ, ತಜ್ಞ ವೈದ್ಯರಾದ ಡಾ.ಈಶ್ವರ ಸವಡಿ, ಫಿಜಿಶಿಯನ್ ಡಾ.ಸಂಗನಬಸಪ್ಪ, ಡಾ.ಸೋಮಶೇಖರ ಕೆ., ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ಹಾಗೂ ವಿವಿಧ ತಾಲ್ಲೂಕುಗಳ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ಹೂಗಾರ’ ಕನ್ನಡ ಚಲನಚಿತ್ರದ ಚಿತ್ರೀಕರಣ ಮುಕ್ತಾಯ



**ಬೆಳಗಾವಿ ವಾರ್ತೆ ಸಿದ್ಧನಕೊಳ್ಳ:** ಕೀರ್ತನ ಮೂವ್ಹಿ ಮೇಕರ್ಸ್ ಹಾಗೂ ಕೆ ಆರ್ ಎಸ್ ಪ್ರೊಡಕ್ಷನ್ ಬೆಂಗಳೂರ ಇವರ ‘ಹೂಗಾರ’ ಉಪ ಶಿರ್ಷಿಕೆ ‘ಕಂಬದಮಲ್ಲ’ ಕನ್ನಡ ಚಲನಚಿತ್ರದ ಚಿತ್ರೀಕರಣ ಸಂಪೂರ್ಣ ಮುಕ್ತಾಯವಾಗಿದೆ.

ಬಾಗಲಕೋಟ ಜಿಲ್ಲೆಯ ಇಲಕಲ್ ತಾಲೂಕಿನ ಸಿದ್ಧನಕೊಳ್ಳಮಠದಲ್ಲಿ ಡಾ.ಶಿವಕುಮಾರ ಶ್ರೀಗಳ ಸಾನಿಧ್ಯದಲ್ಲಿ ನಡೆದ ಸಮಾರಂಭದಲ್ಲಿ ಕುಂಬಳಕಾಯಿ ಒಡೆಯುವ ಮೂಲಕ ಚಿತ್ರೀಕರಣನ್ನು ಮುಕ್ತಾಯಗೊಳಿಸಲಾಯಿತು. ಸತತ 28 ದಿನಗಳ ಕಾಲ ಸಿದ್ದನಕೊಳ್ಳ ಮಠ ಹಾಗೂ ಸಿದ್ದನಕೊಳ್ಳ ಗ್ರಾಮದ ಸುತ್ತಮುತ್ತ ಪ್ರದೇಶದಲ್ಲಿ ಉರಿವ ಬಿಸಿಲನ್ನು ಲೆಕ್ಕಿಸದೆ ಚಿತ್ರತಂಡವು ಚಿತ್ತೀಕರಣ ನಡೆಸಿ, ಉತ್ತರ ಕರ್ನಾಟಕದ ಭಾಷೆಯ ಜೊತೆಗೆ ಉತ್ತರ ಕರ್ನಾಟಕದ ಕಲಾವಿದರಿಗೂ ಅವಕಾಶವನ್ನು ನೀಡಲಾಗಿದೆ. ಶ್ರೀಮಠದ ಪೀಠಾಧಿಪತಿಗಳಾದ ಡಾ.ಶಿವಕುಮಾರ ಸ್ವಾಮೀಜಿ ಅವರು ಚಿತ್ರದ ಹಾಡಿನಲ್ಲಿ ಅಭಿನಯಿಸಿದ್ದು ಚಿತ್ರ ತಂಡಕ್ಕೆ ಆಶೀರ್ವದಿಸಿ ಸಂಪೂರ್ಣ ಬೆಂಬಲ ನೀಡಿದ್ದಾರೆ. ಜೊತೆಗೆ ಗ್ರಾಮಗಳ ಜನತೆ ಕೂಡ ಯಾವುದೊಂದು ಕೊರತೆಯಾಗದಂತೆ ಸಂಪೂರ್ಣ ಸಹಕಾರ ನೀಡಿ ಚಿತ್ರೀಕರಣಕ್ಕೆ ಅನುಕೂಲ ಒದಗಿಸಿ ಕೊಟ್ಟಿದ್ದಾರೆ ಅವರಿಗೆಲ್ಲ ಕೃತಜ್ಞನಾಗಿರುವೆ ಎಂದು ನಿರ್ದೇಶಕ ಲೋಕೇಶ್ ವಿದ್ಯಾಧರ್ ಹೇಳಿದರು.

ಚಿತ್ರದಲ್ಲಿ ನಾಯಕನಾಗಿ ಸಂತೋಷ್ ಪಾಟೀಲ್, ನಾಯಕಿಯಾಗಿ ಅಪೂರ್ವ, ಸುನಂದಾ ಕಲ್ಬುರ್ಗಿ, ಮಹಾಂತೇಶ ಹಳ್ಳೂರ, ಮಾಸ್ಟರ್ ತೇಜಸ್, ಕಾಮಿಡಿ ಕಿಲಾಡಿ ಖ್ಯಾತಿಯ ದಾನಪ್ಪ, ಮುತ್ತುರಾಜ್ ಬುದ್ನಿ, ಕಿಟ್ಟಿ ತಾಳಿಕೋಟೆ, ಮಂಜುಳಾ ಅರಸ್, ಭಾವನಾ ಶಿಂಧೆ, ಕುಮಾರಿ ಧನ್ಯ, ಕಿರಣ, ದಶರಥ, ವಿದ್ಯಾ ಗಂಜಿಹಾಳ ಮೊದಲಾದವರಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಜನಾರ್ಧನ್ ರಾಜು ,ಸುವೀಶ, ನೃತ್ಯ ನಾಗರಾಜ್, ಸಂಭಾಷಣೆ ಶಿವಂ ಬೆಂಗೇರಿ, ಸಾಹಿತ್ಯ ಲೋಕೇಶ್ ವಿದ್ಯಾಧರ್, ಶಿವರಾಜ್, ಕಿನ್ನಾಳ ರಾಜ್, ಸಂಗೀತ ರಿದಂ ಕುಟ್ಟಿ, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದ್ದು, ಈಗಾಗಲೇ ‘ಒಬ್ಬಟ್ಟು’ ಚಿತ್ರ ನಿರ್ದೇಶಿಸಿದ್ದ ಲೋಕೇಶ್ ವಿದ್ಯಾಧರ್ ಕಥೆ–ಚಿತ್ರಕಥೆ–ನಿರ್ದೇಶನ ಮಾಡಿದ್ದಾರೆ. ಇನ್ನು ಪೋಸ್ಟಪ್ರೊಡಕ್ಷನ್ ಕಾರ್ಯವನ್ನು ಈ ವಾರದಲ್ಲೇ ಆರಂಭಿಸಿ ಶೀಘ್ರ ಚಿತ್ರವನ್ನು ಬೆಳ್ಳಿತೆರೆಗೆ ತರಲಾಗುವದು, ಚಿತ್ರದ ಹಾಡುಗಳನ್ನು ಹುಬ್ಬಳ್ಳಿ, ಗದಗ, ಬಾಗಲಕೋಟೆ ಮತ್ತು ಬೆಂಗಳೂರಿನಲ್ಲಿ ಬಿಡುಗಡೆ ಮಾಡುವ ಆಲೋಚನೆ ಇದೆ. ಕೀರ್ತನ ಮೂವ್ಹಿ ಮೇಕರ್ಸ್ ಹಾಗೂ ಕೆ ಆರ್ ಎಸ್ ಪ್ರೊಡಕ್ಷನ್ ಅವರು ಚಿತ್ರದ ನಿರ್ಮಾಪಕರಾಗಿದ್ದಾರೆ ಎಂದು ನಿರ್ದೇಶಕ ಲೋಕೇಶ ತಿಳಿಸಿದ್ದಾರೆ.

**–ಡಾ.ಪ್ರಭು ಗಂಜಿಹಾಳ ಮೊ–9448775346**

# ಕೃಷಿ ವಿಶ್ವವಿದ್ಯಾಲಯ, ಧಾರವಾಡ ನವೀನ ಆಲೋಚನೆಗಳಿಗೆ ಬೆಂಬಲ ನೀಡಿ ಸ್ಟಾರ್ಟ್‌ಅಪ್‌ಗಳನ್ನು ಉತ್ತೇಜಿಸುತ್ತಿದೆ: ಕುಲಪತಿ, ಡಾ. ಪಿ. ಎಲ್. ಪಾಟೀಲ



**ಬೆಳಗಾವಿ ವಾರ್ತೆ ಧಾರವಾಡ:** “ರೈತರು ವಿವಿಧ ಸವಾಲುಗಳನ್ನು ಎದುರಿಸುತ್ತಿದ್ದು, ಆ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನವೀನ ಆಲೋಚನೆಗಳಿಗೆ ಕೃಷಿ ವಿಶ್ವವಿದ್ಯಾಲಯ, ಧಾರವಾಡ ಬೆಂಬಲ ನೀಡುತ್ತದೆ ಹಾಗೂ ಅವುಗಳನ್ನು ಕೃಷಿ ಸ್ಟಾರ್ಟ್‌ಅಪ್‌ಗಳಾಗಿ ರೂಪುಗೊಳ್ಳಲು ಉತ್ತೇಜಿಸುತ್ತದೆ” ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ. ಎಲ್. ಪಾಟೀಲ ಹೇಳಿದರು.

ಅವರು ಇಂದು (12 ಮೇ 2026) ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೃಷಿಕ್– ಅಗ್ರಿ ಬಿಸಿನೆಸ್ ಇನ್ಕ್ಯುಬೇಟರ್ (ಆರ್.ಕೆ.ವಿ.ವೈ–ಇನ್ನೋವೇಷನ್ ಮತ್ತು ಕೃಷಿ–ಉದ್ಯಮಶೀಲತೆ ಯೋಜನೆ) ಅಡಿಯಲ್ಲಿ ಹದಿಮೂರನೇ ತಂಡಕ್ಕೆ ಆಯ್ಕೆಯಾದ ನವೋದ್ಯಮಗಳ ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದರು.

ಈ ಕೃಷಿ–ಉದ್ಯಮಶೀಲತೆ ತರಬೇತಿಗಾಗಿ ಒಟ್ಟು 30 ಸ್ಟಾರ್ಟ್ ಅಪ್‌ಗಳು ಭಾಗವಹಿಸಿದ್ದು, ಅವುಗಳಲ್ಲಿ 6 ವಿದ್ಯಾರ್ಥಿ ಸ್ಟಾರ್ಟ್‌ಅಪ್‌ಗಳು, 21 ಪ್ರೀ–ಸೀಡ್ ಹಂತದ ಸ್ಟಾರ್ಟ್‌ಅಪ್‌ಗಳು ಹಾಗೂ 3 ಸೀಡ್ ಹಂತದ ಸ್ಟಾರ್ಟ್‌ಅಪ್‌ಗಳು ಸೇರಿವೆ. ರೈತರ ಸಮಸ್ಯೆಗಳು ಮತ್ತು ಅಗತ್ಯತೆಗಳಿಗೆ ಪರಿಹಾರ ಒದಗಿಸುವ ಕೃಷಿ ಹಾಗೂ ಸಂಬಂಧಿತ ಕ್ಷೇತ್ರಗಳ ಸ್ಟಾರ್ಟ್‌ಅಪ್‌ಗಳಿಗೆ ಬೆಂಬಲ ನೀಡುವ ಉದ್ದೇಶದಿಂದ ಯೋಜನೆಯಡಿ ನಾವೀನ್ಯತೆಯುಳ್ಳ ಸ್ಟಾರ್ಟ್‌ಅಪ್‌ಗಳಿಗೆ ಆರ್ಥಿಕ ಹಾಗೂ ತಾಂತ್ರಿಕ ನೆರವು ಒದಗಿಸಲಾಗುತ್ತಿದೆ.

ಕೃಷಿಕ್–ನವೋದ್ಯಮ ಪೋಷಣ ಕೇಂದ್ರದ ಯೋಜನೆಯ ಮುಖ್ಯಸ್ಥರಾದ ಡಾ.॥ ಎಸ್.ಎಸ್. ಡೊಳ್ಳಿ ಅವರು, ಯೋಜನೆಯ ಉದ್ದೇಶ ಮತ್ತು ಸಾಧನೆಗಳ ಕುರಿತು ವಿವರಿಸಿದರು. ಈವರೆಗೆ ಕೃಷಿಕ್–ನವೋದ್ಯಮ ಪೋಷಣ ಕೇಂದ್ರದಿಂದ 12 ಬ್ಯಾಚ್‌ಗಳಲ್ಲಿ 300ಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳಿಗೆ ಯಶಸ್ವಿಯಾಗಿ ತರಬೇತಿ ನೀಡಲಾಗಿದೆ. ಅವುಗಳಲ್ಲಿ 149 ಸ್ಟಾರ್ಟ್‌ಅಪ್‌ಗಳಿಗೆ ಬೆಂಬಲ ಒದಗಿಸಲಾಗಿದೆ. ಒಟ್ಟು ಸ್ಟಾರ್ಟ್‌ಅಪ್‌ಗಳಿಂದ 100 ಕೋಟಿಗೂ ಅಧಿಕ ಆದಾಯ ಮತ್ತು 10 ಲಕ್ಷಕ್ಕೂ ಹೆಚ್ಚು ರೈತರಿಗೆ ಪ್ರಯೋಜನವಾಗಿದೆ ಎಂದು ತಿಳಿಸಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ವಿನ್ಯಾಸ ಚಿಂತನೆ (Design Thinking), ತಂತ್ರಜ್ಞಾನದ ಸಿದ್ಧತೆ ಮಟ್ಟ (Technology Readiness Level – TRL), ಉತ್ಪನ್ನದ ಗುರುತು ನಿರ್ಮಾಣ ಮತ್ತು ಮಾರುಕಟ್ಟೆ ಪ್ರಚಾರ (Branding & Marketing), ಸ್ಟಾರ್ಟ್‌ಅಪ್‌ನಲ್ಲಿ CS ಪಾತ್ರ: IPO ವರೆಗೆ (From Incorporation to IPO), ಸ್ಟಾರ್ಟ್‌ಅಪ್‌ನಲ್ಲಿ ಅಂ ಪಾತ್ರ (ಲೆಕ್ಕಪತ್ರ, ತೆರಿಗೆ ಮತ್ತು ಅನುಸರಣೆ) – CA’s Role in Startup (Accounts, Tax & Compliance), ಸ್ಟಾರ್ಟ್‌ಅಪ್‌ಗಳಿಗೆ IP KPÉ ಮುಖ್ಯ ( Intellectual Property (IP) for Startups) ಕನಿಷ್ಠ ಕಾರ್ಯ ನಿರ್ವಹಣೆಯ ಉತ್ಪನ್ನ (Minimum Viable Product – MVP), ಉತ್ಪನ್ನ–ಮಾರುಕಟ್ಟೆ ಹೊಂದಾಣಿಕೆ (Product Market Fit – PMF), ಸೇರಿದಂತೆ ಹಲವು ವಿಷಯಗಳ ಕುರಿತು ಕ್ಷೇತ್ರ ಪರಿಣಿತರಿಂದ ತರಬೇತಿ ನಡೆಸಲಾಗುತ್ತಿದೆ.

ಕೃಷಿ ವಿಶ್ವವಿದ್ಯಾಲಯದ ಕೃಷಿಕ–ನವೋದ್ಯಮ ಪೋಷಣ ಕೇಂದ್ರ ಆರ್.ಕೆ.ವಿ.ವೈ–ಇನ್ನೋವೇಷನ್ ಮತ್ತು ಕೃಷಿ–ಉದ್ಯಮಶೀಲತೆ ಯೋಜನೆಯಡಿ ಆಸಕ್ತರಿಂದ 14ನೇ ಕೋಹಾರ್ಟ್‌ಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31.05.2026. ಆಸಕ್ತ ಉದ್ಯಮಿಗಳು ಹಾಗೂ ನವೋದ್ಯಮಿಗಳು ಹೆಚ್ಚಿನ ಮಾಹಿತಿಗಾಗಿ www.krishik-abiuasd.org ಜಾಲತಾಣಕ್ಕೆ ಭೇಟಿ ಕೊಡಲು ಕೋರಲಾಗಿದೆ

# ಹುಬ್ಬಳ್ಳಿಯಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹಗಲಿರುಳು ಸಮಾಜಕ್ಕೆ ಸೇವೆಯನ್ನು ಸಲ್ಲಿಸುತ್ತಿರುವ ಹಾಗೂ ಸಧೃಡ ಸಮಾಜ ನಿರ್ಮಾಣಕ್ಕೆ ಉತ್ತಮ ಮಾರ್ಗದರ್ಶನ ನೀಡುತ್ತಿರುವ ಗದಗ ಆದಿಶಕ್ತಿ ನಗರ, ಆಧ್ಯಾತ್ಮ ವಿದ್ಯಾಶ್ರಮದ ಪೂಜ್ಯ ಶ್ರೀ ಶಿವಶರಣೆ ಡಾ ನೀಲಮ್ಮತಾಯಿ ಅಸುಂಡಿ ಅವರು ಹುಬ್ಬಳ್ಳಿಯಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿಯ ಶುಭ ಸಂದರ್ಭದಲ್ಲಿ ಶಿವಶರಣೆ ಡಾ ನೀಲಮ್ಮತಾಯಿ ಅಸುಂಡಿ ಅವರನ್ನು ಭೇಟಿ ಮಾಡಿದ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ, ಸದಸ್ಯ ರು ಮಾತಾಜಿ ಅವರಿಗೆ ಮಾಲಾ ರ್ಪಣೆ ಮಾಡಿ ದರ್ಶನ ಆಶೀರ್ವಾದ ಪಡೆದು ಆತ್ಮೀಯವಾಗಿ ಗೌರವದಿಂದ ಶ್ರದ್ಧಾ ಭಕ್ತಿಯಿಂದ ನಮನಗಳನ್ನು ಸಲ್ಲಿಸಿದರು.

ಮಾತಾಜಿ ಅವರ ಆಶೀರ್ವಾದ ಸದಾವಕಾಲ ಭಕ್ತರ ಮೇಲೆ ಇರಲಿ ಎಂದು ಆಶಯ ವ್ಯಕ್ತಪಡಿಸಿದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ವಿ ಜಿ ಪಾಟೀಲ್, ವೀರಣ್ಣ ಹೂಲಿ, ಆರ್ ಕೆ ಪಾಟೀಲ್, ಡಿ.ಸಿ.ರಂಗರಡ್ಡಿ, ಮೋಹನ್ ಹೊಸಮನಿ, ಗಣ್ಯರು , ಮುಂತಾದವರು ಭಾಗವಹಿಸಿದ್ದರು.

# ‘ನನ್ನ ಹೆಂಡತಿಯ ಮದುವೆ ನಿಲ್ಲಿಸಿ’– ಪೊಲೀಸರಿಗೆ ಪತಿ ಮನವಿ



**ಬೆಳಗಾವಿ ವಾರ್ತೆ ಬೆಳಗಾವಿ:** ಹಣದಾಸೆಗೆ ನನ್ನ ಪತ್ನಿಗೆ ಮತ್ತೊಂದು ಮದುವೆ ಮಾಡುತ್ತಿದ್ದಾರೆ ದಯವಿಟ್ಟು ನಿಲ್ಲಿಸಿ ಎಂದು ಪತಿ ಪೊಲೀಸರಿಗೆ ಮೊರೆ ಹೋದ ವಿಲಕ್ಷಣ ಘಟನೆ ಬೆಳಗಾವಿ ಹಿರೇಬಾಗೇವಾಡಿಯಲ್ಲಿ ನಡೆದಿದೆ.

ಹಣದಾಸೆಗಾಗಿ ನನ್ನ ಪತ್ನಿಯನ್ನು ಆಕೆಯ ತವರು ಮನೆಯವರೇ ಇನ್ನೊಬ್ಬನೊಂದಿಗೆ ಮದುವೆ ಮಾಡಲು ಮುಂದಾಗಿದ್ದಾರೆ. ನಾಳೆಯೇ ಬುಧವಾರ ನಡೆಯುವ ಮದುವೆ ನಿಲ್ಲಿಸಿ ನ್ಯಾಯ ಕೊಡಿಸಿ ಎಂದು ಪತಿರಾಯನೊಬ್ಬ ಪೊಲೀಸ್ ಮೊರೆ ಹೋಗಿದ್ದಾನೆ.

ಈ ಬಗ್ಗೆ ಮಾಧ್ಯಮಗಳ ಮುಂದೆ ತಮ್ಮ ನೋವು ತೋಡಿಕೊಂಡಿರುವ ಸಂತ್ರಸ್ತ ವೆಂಕಟೇಶ ರಾಥೋಡ, 2016ರಿಂದಲೇ ಪರಿಚಯವಾದ ಯುವತಿ ಮಂಜುಳಾ ಹಂಚಿನಮನಿಯನ್ನು 2022ರಲ್ಲಿ ಮದುವೆಯಾಗಿದ್ದೇನೆ. ನಾನು ಹಾಗೂ ಮಂಜುಳಾ ಪರಸ್ಪರ ಒಪ್ಪಿಗೆಯಿಂದ ಮದುವೆಯಾಗಿದ್ದೇವೆ ಎಂದು ದಾಖಲೆ ತೋರಿಸಿದ್ದಾರೆ.

ಆದರೆ, ತಮ್ಮ ಮಾವ ರುದ್ರಪ್ಪ ಹಂಚಿನಮನಿ ಹಾಗೂ ಅವರ ಪುತ್ರ ಪ್ರದೀಪ್ ಹಂಚಿನಮನಿ ಅವರು ಮಂಜುಳಾಳನ್ನು ತವರು ಮನೆಯಲ್ಲಿ ಕೂಡಿಹಾಕಿದ್ದು, ತಮ್ಮ ವಿರುದ್ಧ ಇಲ್ಲಸಲ್ಲದ ಪ್ರಕರಣಗಳನ್ನು ದಾಖಲಿಸಿ ಷಡ್ಯಂತ್ರ ರೂಪಿಸಿ ಜೈಲಿಗೆ ಕಳುಹಿಸಿದ್ದರು. ಇದಲ್ಲದೇ ಹಿರೆಬಾಗೇವಾಡಿಯಲ್ಲಿ ತಮ್ಮ ಮೇಲೆ ಹಲ್ಲೆ ನಡೆಸಿ, ಬಂಗಾರ ಹಾಗೂ ಹಣ ಸುಲಿಗೆ ಮಾಡಲಾಗಿದೆ ಎಂದು ಆರೋಪಿಸಿದರು.

ಇದೀಗ ನಾಳೆಯೇ ಆಕೆಯನ್ನು ಮತ್ತೊಬ್ಬರಿಗೆ ಮದುವೆ ಮಾಡಲು ಯತ್ನಿಸಲಾಗುತ್ತಿದೆ. ಪೊಲೀಸರು ತಕ್ಷಣ ಮದ್ಯಪ್ರವೇಶಿಸಿ ಮದುವೆ ನಿಲ್ಲಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಈ ಕುರಿತು ಹಿರೇಬಾಗೇವಾಡಿ ಠಾಣೆಯಲ್ಲಿ ದೂರು ನೀಡಲಾಗಿದೆ ಎಂದು ತಿಳಿಸಿದ್ದಾರೆ.

# ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎನ್ನಲು ಏಕೆ ಹಿಂದೇಟು? ಒಂದು ಸಾಲಿನ ಠರಾವಿಗೆ ಪಾಲಿಕೆ ಸುತ್ತ ‘ಸರ್ಪಗಾವಲು’




**ಬೆಳಗಾವಿ ವಾರ್ತೆ ಬೆಳಗಾವಿ:** ಬೆಳಗಾವಿ ಮಹಾನಗರ ಪಾಲಿಕೆ ಸುತ್ತ ಇಂದು ಕಂಡು ಬಂದ ಭಾರೀ ಬಿಗಿ ಬಂದೋಬಸ್ತ್ ನಗರದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ನಗರಸೇವಕರನ್ನು ಹೊರತುಪಡಿಸಿ ಉಳಿದವರಿಗೆ ಪ್ರವೇಶ ನಿರ್ಬಂಧ, ಪಾಲಿಕೆ ಆವರಣದ ಸುತ್ತ ಪೊಲೀಸ್ ಸರ್ಪಗಾವಲು, ಒಳಗೆ ಪ್ರವೇಶದ ಮೇಲೆ ಕಠಿಣ ನಿಯಂತ್ರಣ–ಇದೆಲ್ಲದರ ಹಿಂದೆ ಏನು? ಎಂಬ ಪ್ರಶ್ನೆಗೆ ಸಿಗುತ್ತಿರುವ ಉತ್ತರ ಒಂದೇ: “ಒಂದು ಸಾಲಿನ ಠರಾವಿನ ಭಯ!”

ಕನ್ನಡಪರ ಸಂಘಟನೆಗಳ ಬೇಡಿಕೆ ಅಷ್ಟೇ ಸರಳವಾಗಿದೆ. ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ” ಎಂಬ ಒಂದು ಸಾಲಿನ ಠರಾವನ್ನು ಪಾಲಿಕೆ ಸಾಮಾನ್ಯ ಸಭೆಯಲ್ಲಿ ಅಂಗೀಕರಿಸಬೇಕು. ಈ ಸಂಬಂಧ ಕನ್ನಡ ಸಂಘಟನೆಗಳು ಈ ಹಿಂದೆಯೇ ಮೇಯರ್ ಹಾಗೂ ಉಪಮೇಯರ್ ಅವರಿಗೆ ಮನವಿ ಸಲ್ಲಿಸಿದ್ದವು. ಆದರೆ “ನಂತರ ನೋಡೋಣ”, “ಕಾಲಾವಕಾಶ ಬೇಕು” ಎಂಬ ಧೋರಣೆ ಕನ್ನಡಿಗರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.

ಈ ಹಿನ್ನೆಲೆಯಲ್ಲಿ ಕನ್ನಡಪರ ಸಂಘಟನೆಗಳು ‘ಪಾಲಿಕೆ ಚಲೋ’ ಹಮ್ಮಿಕೊಂಡಿದ್ದು, ಇಂದಿನ ಸಭೆ ಈಗ ಕೇವಲ ಆಡಳಿತಾತ್ಮಕ ಸಭೆಯಾಗಿ ಉಳಿದಿಲ್ಲ; ಅದು ಬೆಳಗಾವಿಯ ಕನ್ನಡ ಸ್ವಾಭಿಮಾನ ಪರೀಕ್ಷೆಯ ವೇದಿಕೆಯಾಗಿ ಮಾರ್ಪಟ್ಟಿದೆ.

ಪಾಲಿಕೆ ಸಭೆಯಲ್ಲಿ “ಬೆಳಗಾವಿ ಕರ್ನಾಟಕದ್ದು” ಎಂಬ ಸ್ಪಷ್ಟ ಠರಾವು ಅಂಗೀಕಾರವಾದರೆ ಕನ್ನಡಿಗರಿಂದ ಜೈಕಾರ. ಆದರೆ ಅದಕ್ಕೆ ಕುಂಟು ನೆಪ, ವಿಳಂಬ ಅಥವಾ ಮೌನದ ರಾಜಕಾರಣ ಮುಂದುವರಿದರೆ ಮೇಯರ್– ಉಪಮೇಯರ್‌ರೇ ನೇರ ಟಾರ್ಗೆಟ್ ಆಗುವ ಸಾಧ್ಯತೆ ಇದೆ. ಏಕೆಂದರೆ, ಈ ವಿಷಯದಲ್ಲಿ ಶಾಸಕರು ಸಂಪೂರ್ಣ ಅಧಿಕಾರವನ್ನು ಮೇಯರ್ ಹಾಗೂ ಉಪಮೇಯರ್ ಅವರಿಗೆ ಬಿಟ್ಟಿದ್ದಾರೆಂಬ ಮಾತು ರಾಜಕೀಯ ವಲಯದಲ್ಲಿ ಕೇಳಿಬರುತ್ತಿದೆ.

ಆದರೆ ಪ್ರಮುಖ ಪ್ರಶ್ನೆ ಇಲ್ಲಿದೆ:

ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂದು ಹೇಳುವ ಒಂದು ಸಾಲಿನ ಠರಾವಿಗೆ ಇಷ್ಟೊಂದು ಬಂದೋಬಸ್ತ್ ಏಕೆ?

ಈ ನಿರ್ಣಯದ ಭಯ ಯಾರಿಗೆ? ಪಾಲಿಕೆ ಸುತ್ತ ಇಷ್ಟು ಭದ್ರತಾ ಕೋಟೆ ಕಟ್ಟಲು ಸೂಚಿಸಿದವರು ಯಾರು? ಎಂಬ ಪ್ರಶ್ನೆ ಈಗ ಕನ್ನಡಿಗರ ಬಾಯಲ್ಲಿ ಕೇಳಿಬರುತ್ತಿದೆ.

ಬೆಳಗಾವಿ ಗಡಿ ಪ್ರಶ್ನೆ ಭಾವನೆಗೆ ಸಂಬಂಧಿಸಿದ ವಿಷಯ. ಇಂತಹ ಸಂದರ್ಭದಲ್ಲಿ ಪಾಲಿಕೆ ನಾಯಕತ್ವ ಸ್ಪಷ್ಟ ನಿಲುವು ತಾಳುತ್ತದೆಯೇ? ಅಥವಾ ಮತ್ತೆ ರಾಜಕೀಯ ಲೆಕ್ಕಾಚಾರದ ಹಿಂದೆ ಅಡಗುತ್ತದೆಯೇ? ಎಂಬುದರ ಮೇಲೆ ಇಂದಿನ ಸಭೆಯ ಗಂಭೀರತೆ ನಿಂತಿದೆ.

ಇಂದು ಪಾಲಿಕೆ ಸಭೆಯಲ್ಲಿ ಒಂದು ಸಾಲಿನ ಠರಾವು ಅಂಗೀಕಾರವಾಗುತ್ತದೆಯೇ ಎಂಬುದಷ್ಟೇ ಪ್ರಶ್ನೆಯಲ್ಲ;

ಬೆಳಗಾವಿಯ ಪಾಲಿಕೆ ಕನ್ನಡಿಗರ ಮನಸ್ಸಿಗೆ ಉತ್ತರ ಕೊಡುತ್ತದೆಯೇ? ಎಂಬುದೇ ನಿಜವಾದ ಪ್ರಶ್ನೆ.

# ವಿವಿಧ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಧಾರವಾಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ॥ ಎಪಿಜೆ ಅಬ್ದುಲ್ ಕಲಾಂ ವಸತಿ ಕಾಲೇಜು ಅಂಚಟಗೇರಿ ಹುಬ್ಬಳ್ಳಿ, ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಶಿಂಗನಹಳ್ಳಿ, ಮೌಲಾನಾ ಆಜಾದ ಮಾದರಿ ಕಾಲೇಜು ಸದಾಶಿವನಗರ ಹುಬ್ಬಳ್ಳಿ ಹಾಗೂ ಮಹಿಳಾ ಪದವಿ ಪೂರ್ವ ಕಾಲೇಜುಗಳಲ್ಲಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದಲ್ಲಿ ವಿವಿಧ ವಿಷಯಗಳನ್ನು ಇಂಗ್ಲೀಷ್ ಮಾಧ್ಯಮದಲ್ಲಿ ಬೋಧಿಸಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಮೇ 18, 2026 ರ ರೋಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು.

ಅಭ್ಯರ್ಥಿಗಳು ತಮ್ಮ ಸಂಬಂಧಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ ಹಾಗೂ ಬಿ.ಎಡ್ ಹೊಂದಿರಬೇಕು. ಹುದ್ದೆಗಳ ವಿವರ ಹೀಗಿವೆ, ಭೌತಶಾಸ್ತ್ರ 2, ರಸಾಯನಶಾಸ್ತ್ರ 2, ಗಣಿತ 3, ಜೀವಶಾಸ್ತ್ರ 2, ಕನ್ನಡ 3, ಆಂಗ್ಲ 3, ಉರ್ದು 2, ಕಂಪ್ಯೂಟರ್ 2, ಅಕೌಂಟೆನ್ಸಿ 2, ಬಿಸಿನೆಸ್ ಸ್ಟಡೀಸ್ 2, ಅರ್ಥಶಾಸ್ತ್ರ 2, ಇತಿಹಾಸ 1, ರಾಜ್ಯಶಾಸ್ತ್ರ 1 ಮತ್ತು ಸಮಾಜಶಾಸ್ತ್ರ 1 ಹುದ್ದೆಗಳಿಗೆ ಆಸಕ್ತ ಹಾಗೂ ಸೂಕ್ತ ವಿದ್ಯಾರ್ಹತೆವುಳ್ಳ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಧಾರವಾಡ ಸರ್ಕಾರಿ ಮುದ್ರಣಾಲಯ ಹತ್ತಿರ, ಸಾಧನಕೇರಿ ರಸ್ತೆಯ ಮೌಲಾನಾ ಆಝಾದ ಭವನ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಅವರ ಕಾರ್ಯಾಲಯವನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ 0836–2971590 ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಳಿಯ ಮೇಲೆ ಉರುಳಿದ ಮರ: ಕ್ಷಣಾರ್ಧದಲ್ಲಿ ನಿಂತ ರೈಲು



**ಬೆಳಗಾವಿ ವಾರ್ತೆ ಬೆಳಗಾವಿ:** ಖಾನಾಪುರ ತಾಲೂಕಿನ ನಾಗರಗಾಳಿ–ತಾವರಗಟ್ಟಿ ರೈಲು ನಿಲ್ದಾಣಗಳ ನಡುವಿನ ದಟ್ಟ ಅರಣ್ಯ ಪ್ರದೇಶದಲ್ಲಿ ಮಂಗಳವಾರ ಸಂಜೆ ರೈಲು ಹಳಿಯ ಮೇಲೆ ಬೃಹತ್ ಮರ ಉರುಳಿ ಬಿದ್ದ ಪರಿಣಾಮ ಅಳ್ನಾವರ ಲೋಂಡಾ ಮಾರ್ಗದಲ್ಲಿ ಸಂಚರಿಸುವ ಹಲವು ರೈಲುಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಯಿತು. ಮಂಗಳವಾರ ಸಂಜೆ ಸುಮಾರು 5.30 ರ ವೇಳೆಗೆ ನಾಗರಗಾಳಿ ಭಾಗದಲ್ಲಿ ಮಿಂಚು ಗುಡುಗು ಸಹಿತ ಮಳೆ ಸುರಿಯಲಾರಂಭಿಸಿತು. ಇದೇ ವೇಳೆ ಬೀಸಿದ ಬಿರುಗಾಳಿಗೆ ಹಳಿ ಪಕ್ಕದಲ್ಲಿದ್ದ ಅರಣ್ಯ ಪ್ರದೇಶದ ಸುಮಾರು 30 ಅಡಿ ಎತ್ತರದ ಮರ ರೈಲು ಹಳಿಯ ಮೇಲೆ ಬಿದ್ದಿತು.

ಅದೇ ಸಮಯದಲ್ಲಿ ಈ ಮಾರ್ಗದಲ್ಲಿ ಸಂಚರಿಸುತ್ತಿದ್ದ ಕೊಲ್ಲಾಪುರ ತಿರುಪತಿ ಹರಿಪ್ರಿಯಾ ಎಕ್ಸ್‌ಪ್ರೆಸ್ ರೈಲು, ಘಟನೆ ಸ್ಥಳದಿಂದ ಕೆಲವೇ ಅಡಿಗಳ ದೂರದಲ್ಲಿ ನಿಲ್ಲಿಸಲ್ಪಟ್ಟಿದ್ದು, ಸಂಭವನೀಯ ದೊಡ್ಡ ಅವಘಡ ತಪ್ಪಿದಂತಾಗಿದೆ. ರೈಲು ಸಿಬ್ಬಂದಿಯ ಎಚ್ಚರಿಕೆ ಹಾಗೂ ಸಮಯೋಚಿತ ಕ್ರಮದಿಂದ ಪ್ರಯಾಣಿಕರು ಆತಂಕದಿಂದ ಪಾರಾಗಿದ್ದಾರೆ. ಘಟನೆ ಮಾಹಿತಿ ತಿಳಿಯುತ್ತಿದ್ದಂತೆಯೇ ನಾಗರಗಾಳಿ ಮತ್ತು ತಾವರಗಟ್ಟಿ ನಿಲ್ದಾಣಗಳ ರೈಲ್ವೆ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಬಳಿಕ ವಿಷಯವನ್ನು ಮೇಲಧಿಕಾರಿಗಳಿಗೆ ತಿಳಿಸಿದರು. ಸ್ಥಳೀಯರ ಸಹಾಯದಿಂದ ಮರದ ಮೇಲ್ಭಾಗವನ್ನು ಒಂದು ಹಳಿಯಿಂದ ತೆರವುಗೊಳಿಸಿ ಅಳ್ನಾವರ ಲೋಂಡಾ ಮಾರ್ಗದಲ್ಲಿ ರೈಲು ಸಂಚಾರಕ್ಕೆ ತಾತ್ಕಾಲಿಕ ಅವಕಾಶ ಕಲ್ಪಿಸಲಾಯಿತು.

ಲೋಂಡಾ ಅಳ್ನಾವರ ದಿಕ್ಕಿನ ಹಳಿಯ ಮೇಲೆ ಬಿದ್ದ ಮರವನ್ನು ಸಂಪೂರ್ಣ ತೆರವುಗೊಳಿಸುವ ಕಾರ್ಯಾಚರಣೆ ಮುಂದುವರಿದಿದೆ. ಈ ಘಟನೆಯಿಂದ ಮಾರ್ಗದಲ್ಲಿ ಸಂಚರಿಸುವ ಕೆಲವು ರೈಲುಗಳು ವಿಳಂಬಗೊಂಡಿವೆ ಎಂದು ರೈಲ್ವೆ ಮೂಲಗಳು ತಿಳಿಸಿವೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001